ಸಂಪುಟ: 11 ಸಂಚಿಕೆ: 225 ಪುಟಗಳು: 4+2 ಬೆಲೆ: ₹ 3.00 ಮಂಗಳವಾರ ಅಕ್ಟೋಬರ್ 13, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 225 Pages : 4+2 Rate : 3.00 Tuesday, october 13, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಅವಳಿ ನಗರದಲ್ಲಿ ಇಂದು ವಿವಿಧೆಡೆ ನೀರು ಪೂರೈಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ವಿವಿಧ ವಾರ್ಡ್‌ಗಳ ಆಯ್ದ ಬಡಾವಣೆ ಹಾಗೂ ರಸ್ತೆಗಳಿಗೆ ಅ. 13ರಂದು ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ವಾರ್ಡ್‌ವಾರು ನೀರು ಪೂರೈಕೆಯಾಗುವ ಪ್ರದೇಶಗಳ ವಿವರ ಹೀಗಿದೆ.**

**ವಾರ್ಡ್ ನಂ. 5:** ಹಳ್ಳಿಕೇರಿ ಪ್ಲಾಟ್ ಲೈನ್.

**ವಾರ್ಡ್ ನಂ. 6:** ಚನ್ನಪ್ಪಗೌಡ್ರ ಲೈನ್, ಹರವಿಯವರ ಲೈನ್, ಖಾನಾಪುರ ಲೈನ್.

**ವಾರ್ಡ್ ನಂ. 15:** ಶಹಾಪುರ ಪೇಟೆ ಲೈನ್.

**ವಾರ್ಡ್ ನಂ. 16:** ಬಸವೇಶ್ವರ ನಗರ, ಜವಳಿ ಗಲ್ಲಿ, ಬಸವೇಶ್ವರ ರಸ್ತೆ ಲೈನ್‌ನ ಉಳಿದ ಭಾಗಗಳು.

**ವಾರ್ಡ್ ನಂ. 21 ಮತ್ತು 22:** ವಿಜಯನಗರ ಶಾಲೆ ಲೈನ್, ಟವರ್ ಕಂಬದ ಲೈನ್, ಶಿಗ್ಗಾಂವಿಯವರ ಲೈನ್, ಗರಗದವರ ಲೈನ್, ವಾಲ್ಮೀಕಿ ಭವನದ ಉಳಿದ ಭಾಗಗಳು.

**ವಾರ್ಡ್ ನಂ. 4:** ಗೌರಿಗುಡಿ ಓಣಿ ಲೈನ್, ಹಳೆ ಪೋಸ್ಟ್ ಆಫೀಸ್ ಲೈನ್, ಟರ್ನಲ್ ಪೇಟೆ ಲೈನ್, ಟೆಲಿಫೋನ್ ಆಫೀಸ್ ಹಿಂಭಾಗ ಮತ್ತು ಮುಂಭಾಗ, ಮಲ್ಲಪ್ಪ ಬಡಾವಣೆ ಲೈನ್, 275 ಪ್ಲಾಟ್‌ಗಳ ಲೈನ್, 200 ಮನೆ ಲೈನ್, 35 ಮನೆ ಲೈನ್ ಹಾಗೂ ವಾಂಬೆ ಬಡಾವಣೆಯ ಉಳಿದ ಭಾಗಗಳು.

**ವಾರ್ಡ್ ನಂ. 29:** ಹೊಸ ಹುಡ್ಕೋ ಲೈನ್, ಹಳೆ ಲೈನ್, ನಾಗಪ್ಪನ ಕಟ್ಟೆ ಲೈನ್ ಹಾಗೂ ಹೊಸ ಲೈನ್.

**ವಾರ್ಡ್ ನಂ. 21 ಮತ್ತು 16:** ರಹಮತ್ ನಗರ 1, 2 ಮತ್ತು 3ನೇ ಭಾಗಗಳ ಲೈನ್, ಗುಡುದೂರೆಯವರ ಲೈನ್‌ನ ಎಡ ಮತ್ತು ಬಲ ಭಾಗಗಳು, ಕುಂಬೇಶ್ವರ ನಗರ 1, 2 ಮತ್ತು 3ನೇ ಲೈನ್‌ಗಳು ಹಾಗೂ ಸುಣ್ಣದವರ 1, 2 ಮತ್ತು 3ನೇ ಭಾಗಗಳ ಉಳಿದ ಪ್ರದೇಶಗಳು.

**ವಾರ್ಡ್ ನಂ. 13 ಮತ್ತು 14:** ವಕೀಲರ ಚಾಳ್, ಗೌಸ್ ಬಿಲ್ಡಿಂಗ್, ಹುಡ್ಕೋ ಲೈನ್, ಕಾರಂತರ ಲೈನ್, ಸೋನಿ ಲೈನ್ ಹಾಗೂ ಹೊಸಮಠ ದವಾಖಾನೆ ಲೈನ್‌ನ ಉಳಿದ ಭಾಗಗಳು.

**ವಾರ್ಡ್ ನಂ. 33:** ಆರ್.ಕೆ. ನಗರ, ಗುಜಮಾಗಡಿಯವರ ಲೈನ್, ಪೂಜಾರಿಯವರ ಲೈನ್, ಶ್ರಾವಣಿ ಹೋಟೆಲ್ ಲೈನ್, ಸೂರ್ಯ ನಗರ, ಆದರ್ಶ ನಗರ, ದೇವರಾಜ ಹಾಸ್ಟೆಲ್ ಲೈನ್, ಬಯಲು ಆಂಜನೇಯ ಮಠದ ಲೈನ್ ಹಾಗೂ ಉಳಿದ ಭಾಗಗಳು.

**ವಾರ್ಡ್ ನಂ. 12:** ಅನಂತ ಕಾರ್ಕಾಳ ಅವರ ಲೈನ್, ಗಣಪತಿ ಗುಡಿ ಲೈನ್, ಅಗಸರ ಲೈನ್, ಮುಧೋಳ ಲೈನ್, ಜೆ.ಟಿ. ಕಾಲೇಜು ರಸ್ತೆ ಲೈನ್, ಅರಸಿದ್ದಿಯವರ ಲೈನ್, ಉದ್ದಾರ ಪೋಸ್ಟ್ ಮಾಸ್ತರ ಲೈನ್, ಜಾದವ್ ಲೈನ್ ಹಾಗೂ ಉಳಿದ ಭಾಗಗಳು.

ತಾಂತ್ರಿಕ ಕಾರಣಗಳಿಂದ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಮನವಿ ಮಾಡಿದ್ದಾರೆ.

### ಕರಡು ಪಟ್ಟಿ ಪ್ರಕಟವಾಗುತ್ತಿದ್ದಂತೆ ಆಕಾಂಕ್ಷಿಗಳಲ್ಲಿ ತಳಮಳ, ಮೀಸಲಾತಿಗೆ ಬಿಜೆಪಿ ಆಕ್ಷೇಪ

# ಜಿಪಂ, ತಾಪಂ ಮೀಸಲಾತಿ ಕಿಡಿ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬಹುದಿನಗಳಿಂದ ಕಾಯುತ್ತಿದ್ದ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳ ಕರಡು ಮೀಸಲಾತಿ ಪಟ್ಟಿ ಪ್ರಕಟವಾಗುತ್ತಿದ್ದಂತೆ ರಾಜಕೀಯ ಚಟುವಟಿಕೆ ಗರಿಗೆದರಿವೆ. ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ಧತೆ ನಡೆಸುತ್ತಿದ್ದ ಆಕಾಂಕ್ಷಿಗಳಲ್ಲಿ ಕೆಲವರಿಗೆ ಮೀಸಲಾತಿ ಸಂತಸ ತಂದಿದ್ದರೆ,

ಇನ್ನು ಕೆಲವರಿಗೆ ನಿರಾಸೆ ಮೂಡಿಸಿದೆ. ಕರಡು ಪಟ್ಟಿಯಲ್ಲಿನ ಮೀಸಲಾತಿ ಹಂಚಿಕೆ ಕುರಿತು ಬಿಜೆಪಿ ಮುಖಂಡರು ಆಕ್ಷೇಪ ವ್ಯಕ್ತಪಡಿಸಿದ್ದು, ಮರುಪರಿಶೀಲನೆಗೆ ಆಗ್ರಹಿಸಿದ್ದಾರೆ.




ಮಾಗಡಿ, ಬೆಳ್ಳಟ್ಟಿ, ಹೆಬ್ಬಾಳ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಕರಡು ಮೀಸಲಾತಿ ಪ್ರಕಟವಾಗಿದ್ದು, ಮಾಗಡಿ ಕ್ಷೇತ್ರವನ್ನು ಪರಿಶಿಷ್ಟ ಜಾತಿ ಮಹಿಳೆಗೆ, ಬೆಳ್ಳಟ್ಟಿ ಕ್ಷೇತ್ರವನ್ನು ಪರಿಶಿಷ್ಟ ಪಂಗಡಕ್ಕೆ ಹಾಗೂ ಹೆಬ್ಬಾಳ ಕ್ಷೇತ್ರವನ್ನು ಸಾಮಾನ್ಯ ಮಹಿಳೆಗೆ ಮೀಸಲಿಡಲಾಗಿದೆ.

ತಾಲೂಕು ಪಂಚಾಯಿತಿ ಕ್ಷೇತ್ರಗಳ ಪೈಕಿ ಮಾಗಡಿ ಸಾಮಾನ್ಯ, ಕದಕೋಳ ಪರಿಶಿಷ್ಟ ಜಾತಿ, ರಂಟೂರು ಪರಿಶಿಷ್ಟ ಜಾತಿ ಮಹಿಳೆ, ಬೆಳ್ಳಟ್ಟಿ ಸಾಮಾನ್ಯ ಮಹಿಳೆ, ಕೊಂಚಿಗೇರಿ ಸಾಮಾನ್ಯ, ಬನ್ನಿಕೊಪ್ಪ ಪರಿಶಿಷ್ಟ ಪಂಗಡ ಮಹಿಳೆ, ಹೆಬ್ಬಾಳ ಹಿಂದುಳಿದ ವರ್ಗ ಎ ಮಹಿಳೆ, ಸೇವಾನಗರ ಸಾಮಾನ್ಯ ಹಾಗೂ ಕೊಗನೂರು ಸಾಮಾನ್ಯ ಮಹಿಳೆಗೆ ಮೀಸಲಿಡಲಾಗಿದೆ.

ಕರಡು ಮೀಸಲಾತಿ ಪ್ರಕಟವಾಗುತ್ತಿದ್ದಂತೆ ಆಕಾಂಕ್ಷಿಗಳು ತಮ್ಮ ಕ್ಷೇತ್ರಗಳ ಮೀಸಲಾತಿ ಪರಿಶೀಲಿಸಿ ಮುಂದಿನ ರಾಜಕೀಯ ನಡೆ ರೂಪಿಸಿಕೊಳ್ಳುತ್ತಿದ್ದಾರೆ. ಕೆಲವರು ಮೀಸಲಾತಿ ಅನುಕೂಲ ಕರವಾಗಿರುವುದರಿಂದ ಚುನಾವಣಾ ಸಿದ್ಧತೆ ಆರಂಭಿಸಿದ್ದರೆ, ಇನ್ನು ಕೆಲವರು ಮೀಸಲಾತಿ ಬದಲಾವಣೆಗೆ ಒತ್ತಾಯಿಸುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿಯೂ ಮೀಸಲಾತಿ ಹಂಚಿಕೆ ಕುರಿತು ಪರ-ವಿರೋಧದ ಅಭಿಪ್ರಾಯಗಳು ವ್ಯಕ್ತವಾಗುತ್ತಿವೆ.

**ಮರುಪರಿಶೀಲನೆಗೆ ಕಾಂಗ್ರೆಸ್ ಆಗ್ರಹ**

ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಡಿ. ಮಾಗಡಿ ಅವರು ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಕ್ಷೇತ್ರಗಳ ಕರಡು ಮೀಸಲಾತಿಯಲ್ಲಿ ಕೆಲವು ಅಸಂಗತತೆಗಳಿವೆ ಎಂದು ಆಕ್ಷೇಪಿಸಿದ್ದಾರೆ. ಕರಡು ಪಟ್ಟಿಯಲ್ಲಿನ ಲೋಪದೋಷಗಳನ್ನು ಪರಿಶೀಲಿಸಿ, ಅಂತಿಮ ಮೀಸಲಾತಿ ಪ್ರಕಟಿಸುವ ಮೊದಲು ಅಗತ್ಯ ತಿದ್ದುಪಡಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

> ಕರಡು ಮೀಸಲಾತಿಯಲ್ಲಿ ಲೋಪದೋಷಗಳಿದ್ದರೆ ಅವುಗಳನ್ನು ಸರಿಪಡಿಸಿ, ಎಲ್ಲ ವರ್ಗಗಳಿಗೂ ನ್ಯಾಯ ಸಿಗುವಂತೆ ಮರುಪರಿಶೀಲನೆ ನಡೆಸಬೇಕು. ಅಂತಿಮ ಮೀಸಲಾತಿ ಪ್ರಕಟಿಸುವ ಮುನ್ನ ಆಕ್ಷೇಪಣೆಗಳನ್ನು ಗಂಭೀರವಾಗಿ ಪರಿಗಣಿಸಬೇಕು.
>
> – ಎಚ್.ಡಿ. ಮಾಗಡಿ
> ಅಧ್ಯಕ್ಷರು, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್

**ಮೀಸಲಾತಿ ಹಂಚಿಕೆಗೆ ಬಿಜೆಪಿ ಆಕ್ಷೇಪ**

ಬಿಜೆಪಿ ಮುಖಂಡ ಶಂಕರ ಮರಾಠೆ ಅವರು ಕರಡು ಮೀಸಲಾತಿ ಹಂಚಿಕೆಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಎಂಟು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಕರಡು ಮೀಸಲಾತಿಯಲ್ಲಿ ನಾಲ್ಕು ಕ್ಷೇತ್ರಗಳನ್ನು ಪರಿಶಿಷ್ಟ ಜಾತಿಗೆ, ಒಂದು ಕ್ಷೇತ್ರವನ್ನು ಪರಿಶಿಷ್ಟ ಪಂಗಡಕ್ಕೆ, ಎರಡು ಕ್ಷೇತ್ರಗಳನ್ನು ಸಾಮಾನ್ಯ ಮಹಿಳೆಗೆ ಹಾಗೂ ಒಂದು ಕ್ಷೇತ್ರವನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಮೀಸಲಾತಿ ಹಂಚಿಕೆಯಲ್ಲಿ ಎಲ್ಲ ವರ್ಗಗಳಿಗೂ ಸಮಾನ ಅವಕಾಶ ದೊರೆತಿಲ್ಲ ಎಂಬುದು ಅವರ ಆರೋಪ. ಆಡಳಿತ ಪಕ್ಷದ ಪ್ರಭಾವಿ ನಾಯಕರು ತಮ್ಮ ಹಿತಾಸಕ್ತಿಗೆ ಅನುಗುಣವಾಗಿ ಮೀಸಲಾತಿ ರೂಪಿಸಿಕೊಳ್ಳಲು ಪ್ರಭಾವ ಬೀರಿದ್ದಾರೆ ಎಂದೂ ಅವರು ಆರೋಪಿಸಿದ್ದಾರೆ. ಈ ಕುರಿತು ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಕರಡು ಮೀಸಲಾತಿಗೆ ಸಂಬಂಧಿಸಿದಂತೆ ಸಲ್ಲಿಕೆಯಾಗುವ ಆಕ್ಷೇಪಣೆಗಳನ್ನು ಅಧಿಕಾರಿಗಳು ಹೇಗೆ ಪರಿಗಣಿಸುತ್ತಾರೆ ಎಂಬುದು ಈಗ ಕುತೂಹಲ ಮೂಡಿಸಿದೆ. ಅಂತಿಮ ಮೀಸಲಾತಿ ಪ್ರಕಟವಾಗುವ ಮುನ್ನ ಬದಲಾವಣೆಗಳಾಗುತ್ತವೆಯೇ ಎಂಬುದರ ಮೇಲೆ ಹಲವು ಆಕಾಂಕ್ಷಿಗಳ ಚುನಾವಣಾ ಲೆಕ್ಕಾಚಾರ ಅವಲಂಬಿತವಾಗಿದೆ.

### ಜಿಪಂ ಮೀಸಲಾತಿಯಲ್ಲಿ ಎಸ್‌ಸಿ ಸಮುದಾಯಕ್ಕೆ ಅನ್ಯಾಯ: ಗೋವಿಂದಗೌಡ್ರ ಆರೋಪ

## ಸಾಮಾಜಿಕ ನ್ಯಾಯ ಭಾಷಣಕ್ಕೆ ಸೀಮಿತವೇ?



**ವಿಜಯಸಾಕ್ಷಿ ಸುದ್ದಿ, ಗದಗ**

ಸಾಮಾಜಿಕ ನ್ಯಾಯದ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಪಕ್ಷ, ಗದಗ ತಾಲೂಕಿನ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ಹಂಚಿಕೆಯಲ್ಲೂ ಅದನ್ನು ತೋರಿಸಬೇಕಿತ್ತು ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆಗ್ರಹಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ತಾಲೂಕಿನಲ್ಲಿ ಆರು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿದ್ದರೂ ಒಂದೇ ಒಂದು ಕ್ಷೇತ್ರವನ್ನು ಪರಿಶಿಷ್ಟ ಜಾತಿಗೆ ಮೀಸಲಿಡದಿರುವುದು ಸಾಮಾಜಿಕ ನ್ಯಾಯದ ಪ್ರತಿಪಾದನೆಗೆ ವಿರುದ್ಧವಾಗಿದೆ ಎಂದು ಟೀಕಿಸಿದರು.

ಶಾಸಕ ಎಚ್.ಕೆ. ಪಾಟೀಲರು ಸಾರ್ವಜನಿಕ ವೇದಿಕೆಗಳಲ್ಲಿ ಹಿಂದುಳಿದವರು, ದಲಿತರು ಹಾಗೂ ದುರ್ಬಲ ವರ್ಗಗಳ ಪರವಾಗಿ ಮಾತನಾಡುತ್ತಾರೆ. ಆದರೆ, ರಾಜಕೀಯ ಪ್ರಾತಿನಿಧ್ಯದ ವಿಚಾರದಲ್ಲಿ ಈ ಸಮುದಾಯಗಳಿಗೆ ಸೂಕ್ತ ಅವಕಾಶ ಕಲ್ಪಿಸುತ್ತಿಲ್ಲ. ಇಂತಹ ಧೋರಣೆಯಿಂದ ಆ ಸಮುದಾಯಗಳ ಯುವಜನರ ರಾಜಕೀಯ ಭವಿಷ್ಯಕ್ಕೆ ಹಿನ್ನಡೆಯಾಗಲಿದೆ ಎಂದು ಆರೋಪಿಸಿದರು.

ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ಸಮುದಾಯಗಳನ್ನು ಕೇವಲ ಮತಗಳಿಗಾಗಿ ಬಳಸಿಕೊಳ್ಳದೆ, ರಾಜಕೀಯ ಅಧಿಕಾರದಲ್ಲೂ ಅವರಿಗೆ ಪಾಲು ನೀಡಬೇಕು. ರಾಜಕೀಯದಲ್ಲಿ ಭವಿಷ್ಯ ರೂಪಿಸಿಕೊಳ್ಳಲು ಬಯಸುವ ಯುವಕರು ತಮ್ಮನ್ನು ಮತಬ್ಯಾಂಕ್ ಆಗಿ ಬಳಸಿಕೊಳ್ಳುವ ಕಾಂಗ್ರೆಸ್ ಪಕ್ಷದ ನಿಲುವನ್ನು ಪ್ರಶ್ನಿಸಬೇಕು. ಸಾಮಾಜಿಕ ನ್ಯಾಯ ಕೇವಲ ಭಾಷಣಗಳಿಗೆ ಸೀಮಿತವಾಗದೆ, ಅಭ್ಯರ್ಥಿಗಳ ಆಯ್ಕೆ ಮತ್ತು ರಾಜಕೀಯ ಪ್ರಾತಿನಿಧ್ಯದಲ್ಲೂ ಪ್ರತಿಫಲಿಸಬೇಕು ಎಂದು ಹೇಳಿದರು.

ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಅವರು ಗದಗ ಜಿಲ್ಲೆಯ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯ ಜವಾಬ್ದಾರಿಯನ್ನು ತಮಗೆ ವಹಿಸಿದ್ದಾರೆ. ಮೈತ್ರಿ ಅಭ್ಯರ್ಥಿ ಎಸ್.ವಿ. ಸಂಘನೂರ ಪರವಾಗಿ ಪಕ್ಷದ ಪದಾಧಿಕಾರಿಗಳು ಸಂಘಟಿತವಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ವೆಂಕನಗೌಡ ಗೋವಿಂದಗೌಡ್ರ ತಿಳಿಸಿದರು.

ಪದವೀಧರ ಮತದಾರರ ನೋಂದಣಿ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರು ಸುಮಾರು 8 ಸಾವಿರ ಮತದಾರರ ನೋಂದಣಿಗೆ ನೆರವಾಗಿದ್ದಾರೆ. ಕ್ಷೇತ್ರದಲ್ಲಿ ಒಟ್ಟು 19 ಸಾವಿರ ಮತದಾರರಿರುವ ಅಂದಾಜಿದ್ದು, ಮತದಾರರನ್ನು ಸಂಪರ್ಕಿಸಿ ಅಭ್ಯರ್ಥಿ ಪರ ಪ್ರಚಾರ ನಡೆಸಲು ತಾಲೂಕುವಾರು ಉಸ್ತುವಾರಿಗಳನ್ನು ನೇಮಿಸಲಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿ-ಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುದೋಳ, ಜಿ.ಕೆ. ಹಿರೇಮಠ, ರೋಣ ತಾಲೂಕು ಅಧ್ಯಕ್ಷ ಜಿ.ಬಿ. ಹನುಮನಾಳ, ಗದಗ ನಗರ ಘಟಕದ ಅಧ್ಯಕ್ಷ ಪ್ರಫುಲ್ ಪುಣೇಕರ್, ಎಚ್.ಎಚ್. ಹಿರೇಮಠ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಸುಪ್ರೀಂ ಕೋರ್ಟ್ ಮೇಲೆ ಒತ್ತಡ ಹೇರುವ ಯತ್ನ ಖಂಡನೀಯ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಸುಪ್ರೀಂ ಕೋರ್ಟ್‌ಗೆ ಮೆರವಣಿಗೆ ನಡೆಸುವ ಮೂಲಕ ನ್ಯಾಯಾಲಯದ ಮೇಲೆ ಅನಗತ್ಯ ಒತ್ತಡ ಹೇರುವ ಪ್ರಯತ್ನ ಮಾಡಿರುವುದು ಸಂವಿಧಾನ ವಿರೋಧಿ, ಕಾನೂನುಬಾಹಿರ ಹಾಗೂ ಪ್ರಜಾಪ್ರಭುತ್ವ ವಿರೋಧಿ ಕ್ರಮ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸುಪ್ರೀಂ ಕೋರ್ಟ್‌ನಲ್ಲಿ ಈಗಾಗಲೇ ಸಿಇಸಿ ಹಾಗೂ ಎಸ್‌ಐಆರ್‌ಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ನಡೆಯುತ್ತಿದೆ. ನ್ಯಾಯಾಲಯವು ಸತ್ಯ, ವಾಸ್ತವಾಂಶ ಮತ್ತು ಕಾನೂನಿನ ಆಧಾರದ ಮೇಲೆ ನಿರ್ಧಾರಗಳನ್ನು ಕೈಗೊಳ್ಳುತ್ತದೆ. ಇಂತಹ ಸಂದರ್ಭದಲ್ಲಿ ರಾಜಕೀಯ ಪ್ರೇರಿತವಾಗಿ, ದುರುದ್ದೇಶದಿಂದ ನ್ಯಾಯಾಲಯದ ಮೇಲೆ ಒತ್ತಡ ಹೇರುವ ಪ್ರಯತ್ನ ಮಾಡುತ್ತಿರುವುದು ಆತಂಕಕಾರಿ



ಬೆಳವಣಿಗೆ ಎಂದು ಹೇಳಿದ್ದಾರೆ.

ಇಂತಹ ಕ್ರಮಗಳು ದೇಶದಲ್ಲಿ ಅರಾಜಕತೆ ಸೃಷ್ಟಿಸುವುದಲ್ಲದೆ, ಮುಂದಿನ ದಿನಗಳಲ್ಲಿ ಸುಪ್ರೀಂ ಕೋರ್ಟ್ ವಿರುದ್ಧವೇ ದಂಗೆ ಏಳುವ ಪ್ರಯತ್ನಗಳಿಗೆ ನಾಂದಿಯಾಗಬಹುದೆಂಬ ಆತಂಕವಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸುಮಾರು 60 ವರ್ಷಗಳ ಕಾಲ ಆಡಳಿತ ನಡೆಸಿರುವ ಕಾಂಗ್ರೆಸ್ ಪಕ್ಷ ಈ ಮಟ್ಟಕ್ಕೆ ಇಳಿದಿರುವುದು ಖೇದಕರ ಸಂಗತಿ. ದೇಶದ ಎಲ್ಲ ನಾಗರಿಕರು ಇಂತಹ ಕ್ರಮವನ್ನು ಒಗ್ಗಟ್ಟಿನಿಂದ ವಿರೋಧಿಸಬೇಕು ಎಂದು ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ.



**ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಐತಿಹಾಸಿಕ ನಗರೇಶ್ವರ ದೇವಸ್ಥಾನದಲ್ಲಿ 51ನೇ ವರ್ಷದ ಶರನ್ನವರಾತ್ರಿ ಅಂಗವಾಗಿ ಸೋಮವಾರ ಸಂಜೆ ಆರ್ಯವೈಶ್ಯ ಕುಲದೇವತೆ ಶ್ರೀ ಕನ್ಯಕಾಪರಮೇಶ್ವರಿ ದೇವಿಗೆ ಶ್ರೀ ಮಾತಾ ಪಾರ್ವತಿ ದೇವಿಯ ವಿಶೇಷ ಅಲಂಕಾರ ಮಾಡಲಾಗಿದ್ದು, ಭಕ್ತರ ಗಮನ ಸೆಳೆಯಿತು.

## ಅಂತರಂಗ, ಬಹಿರಂಗ ಶುದ್ಧಿ ವೀರಶೈವ ಧರ್ಮದ ಗುರಿ




**ವಿಜಯಸಾಕ್ಷಿ ಸುದ್ದಿ, ಜಮಖಂಡಿ**

ವೀರಶೈವ ಧರ್ಮವು ಅಂತರಂಗ ಮತ್ತು ಬಹಿರಂಗ ಶುದ್ಧಿಗೆ ಮಹತ್ವ ನೀಡಿದ್ದು, ಮಾನವೀಯ ಮೌಲ್ಯಗಳು ಹಾಗೂ ಸಮಾಜ ಸೇವೆಯ ಆದರ್ಶಗಳನ್ನು ಬೋಧಿಸುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರ ಸೋಮೇಶ್ವರ ಜಗದ್ಗುರುಗಳು ಹೇಳಿದರು.

ನಗರದಲ್ಲಿ ಸೋಮವಾರ ನಡೆದ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಎರಡನೇ ದಿನದ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ವೀರಶೈವ ಧರ್ಮವು ಕಾಯಕ, ದಾಸೋಹ, ಗುರುಭಕ್ತಿ, ತತ್ವನಿಷ್ಠೆ ಮತ್ತು ಲೋಕೋದ್ಧಾರಕ್ಕೆ ಆದ್ಯತೆ ನೀಡಿದೆ. ಧರ್ಮದ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮಾನವ ಧರ್ಮದ ಮೌಲ್ಯಗಳನ್ನು ಎತ್ತಿಹಿಡಿಯುವುದೇ ದಸರಾ ಸಮಾರಂಭದ ಉದ್ದೇಶ ಎಂದರು.

ಈ ಸಂದರ್ಭದಲ್ಲಿ ತೇರದಾಳ ಶಾಸಕ ಸಿದ್ದು ಸವದಿ ಅವರು ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳ ಜೀವನ ದರ್ಶನ ಕೃತಿಯನ್ನು ಬಿಡುಗಡೆ ಮಾಡಿ, ಶಿವಾನಂದ ಜಗದ್ಗುರುಗಳ ಸಾಧನೆಗಳು ಸಮಾಜಕ್ಕೆ ಪ್ರೇರಣೆಯಾಗಿವೆ ಎಂದರು.

ಅಮ್ಮಿನಭಾವಿ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮದ ಪ್ರಾಚೀನತೆ ಮತ್ತು ಪಂಚಪೀಠಗಳ ಪರಂಪರೆ ಕುರಿತು ಮಾತನಾಡಿದರು. ಯಡಿಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಧರ್ಮವು ಆಚರಣೆಗೆ ಸೀಮಿತವಾಗದೆ ನಡೆನುಡಿ ಹಾಗೂ ಸಮಾಜ ಸೇವೆಯಲ್ಲಿ ಪ್ರತಿಫಲಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಮಠಗಳ ಶಿವಾಚಾರ್ಯರು, ಶಾಸಕರು ಹಾಗೂ ಗಣ್ಯರು ಪಾಲ್ಗೊಂಡಿದ್ದರು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಡಾ. ಶಾರದಾ ಮುಳ್ಳೂರ ಸ್ವಾಗತಿಸಿದರು. ಗುರುಕುಲದ ಸಾಧಕರಿಂದ ವೇದಘೋಷ ಹಾಗೂ ವೀರೇಶ ಕಿತ್ತೂರ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಿತು.

## ಭಕ್ತಿಯ ಬೆಸುಗೆಯಲ್ಲಿ ಒಂದಾದ ಎಸ್‌ಎಸ್‌ಕೆ ಸಮಾಜ

# ನಮ್ಮೂರ ದಸರಾ–2026'ಕ್ಕೆ ಸಂಭ್ರಮದ ಚಾಲನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಧಾರ್ಮಿಕ ಶ್ರದ್ಧೆ, ಸಾಂಸ್ಕೃತಿಕ ಪರಂಪರೆ ಹಾಗೂ ಸಾಮಾಜಿಕ ಒಗ್ಗಟ್ಟಿನ ಸಮ್ಮಿಲನಕ್ಕೆ ಸಾಕ್ಷಿಯಾಗಿ ಗದಗ ಎಸ್-ಎಸ್‌ಕೆ ಸಮಾಜದ 'ನಮ್ಮೂರ ದಸರಾ-2026' ಉತ್ಸವದ ಮೊದಲ ದಿನದ ಕಾಕಡಾರತಿ ಪೂಜೆ ಭಕ್ತಿಭಾವದಿಂದ ನೆರವೇರಿತು. ಸಮಾಜದ ಹಿರಿಯರು, ಯುವಕರು, ಮಹಿಳೆಯರು ಹಾಗೂ ಗಣ್ಯರು ಪಾಲ್ಗೊಂಡು ಉತ್ಸವಕ್ಕೆ ಮೆರುಗು ತಂದರು.



ಭಾಗ್ಯನಗರ ಎಸ್-ಎಸ್‌ಕೆ ಸಮಾಜದ ಅಧ್ಯಕ್ಷ ಜವಾಹರಲಾಲಸಾ ಅಂಟಾಳಮರದ ಮಾತನಾಡಿ, ಧಾರ್ಮಿಕ ಉತ್ಸವಗಳು ಸಮಾಜದ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ವೇದಿಕೆಗಳಾಗಿವೆ. ಇಂತಹ ಕಾರ್ಯಕ್ರಮಗಳು ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹೋದರತ್ವ ಬೆಳೆಸುವುದರ ಜತೆಗೆ ಸಮಾಜದ ಸಂಘಟನೆಯನ್ನು ಬಲಪಡಿಸುತ್ತವೆ. ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಿ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದು ಕರೆ ನೀಡಿದರು.

ದಸರಾ ಉತ್ಸವ ಸಮಿತಿಯ ಅಧ್ಯಕ್ಷ ಪ್ರಕಾಶ ಬಾಕಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪಾಧ್ಯಕ್ಷ ಬಲರಾಮ ಬಸವಾ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಪಂಚ್ ಕಮಿಟಿ ಅಧ್ಯಕ್ಷ ಫಕೀರಸಾ ಬಿ. ಭಾಂಡಗೆ, ಉಪಾಧ್ಯಕ್ಷ ರಾಜು ವಾಯ್. ಬದಿ, ಗೌರವ ಕಾರ್ಯದರ್ಶಿ ವಿನೋದ್ ಆರ್. ಶಿದ್ಲಿಂಗ, ಸಹಗೌರವ ಕಾರ್ಯದರ್ಶಿ ರವಿ ವಿ. ಶಿದ್ಲಿಂಗ ಸೇರಿದಂತೆ ಪಂಚ್ ಕಮಿಟಿ ಸದಸ್ಯರು, ಮಹಿಳಾ ಮಂಡಳ ಹಾಗೂ ತರುಣ ಸಂಘದ ಪದಾಧಿಕಾರಿಗಳು, ಸಮಾಜದ ಗಣ್ಯರು ಭಾಗವಹಿಸಿದ್ದರು.

> ಧಾರ್ಮಿಕ ಉತ್ಸವಗಳು ಸಮಾಜದ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ವೇದಿಕೆಗಳಾಗಿವೆ. ಇಂತಹ ಕಾರ್ಯಕ್ರಮಗಳು ಸಮಾಜದ ಒಗ್ಗಟ್ಟು ಮತ್ತು ಸಂಘಟನಾ ಶಕ್ತಿಯನ್ನು ಬಲಪಡಿಸುತ್ತವೆ.
>
> – ಜವಾಹರಲಾಲಸಾ
> ಅಂಟಾಳಮರದ, ಅಧ್ಯಕ್ಷರು

## ಮುಳಗುಂದ ಸರ್ಕಾರಿ ಶಾಲೆಯ ಶಿಕ್ಷಕರ ಮಾದರಿ ಕಾರ್ಯ

# ರಜೆಯಲ್ಲೂ ಮಕ್ಕಳ ಭವಿಷ್ಯಕ್ಕೆ ಪಾಠ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರಜೆ ಬಂದರೆ ಬಹುತೇಕ ಶಾಲೆಗಳಲ್ಲಿ ಬೋಧನಾ ಚಟುವಟಿಕೆಗಳಿಗೆ ವಿರಾಮ. ಆದರೆ, ಮುಳಗುಂದ ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಯಲ್ಲಿ ಮಾತ್ರ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕಾರ್ಯಕ್ಕೆ ರಜೆಯಿಲ್ಲ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ಹೆಚ್ಚಿಸಿ, ಉತ್ತಮ ಫಲಿತಾಂಶ ದಾಖಲಿಸುವ ಉದ್ದೇಶದಿಂದ ಶಾಲೆಯ ಶಿಕ್ಷಕರು ಬೇಸಿಗೆ ಹಾಗೂ ದಸರಾ ರಜೆಯಲ್ಲೂ ವಿಶೇಷ ತರಗತಿಗಳನ್ನು ನಡೆಸುತ್ತಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಪ್ರಯತ್ನಕ್ಕೆ ಮುಂದಾಗಿದ್ದಾರೆ.



ಕಳೆದ ಮೂರು ವರ್ಷಗಳಿಂದ 9ನೇ ತರಗತಿ ಪೂರ್ಣಗೊಳಿಸಿ 10ನೇ ತರಗತಿಗೆ ಪ್ರವೇಶಿಸುವ ವಿದ್ಯಾರ್ಥಿಗಳಿಗೆ ಬೇಸಿಗೆ ರಜೆಯಲ್ಲೇ ಪಾಠ ಬೋಧನೆ ಆರಂಭಿಸಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳಿಗೆ ಪಠ್ಯಕ್ರಮವನ್ನು ಮೊದಲೇ ಅಭ್ಯಾಸ ಮಾಡಲು, ವಿಷಯಗಳಲ್ಲಿನ ಗೊಂದಲಗಳನ್ನು ಪರಿಹರಿಸಿಕೊಳ್ಳಲು ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಆತ್ಮವಿಶ್ವಾಸದಿಂದ ಎದುರಿಸಲು ಅನುಕೂಲವಾಗಿದೆ. ಶಿಕ್ಷಕರ ಈ ಕಾಳಜಿ ವಿದ್ಯಾರ್ಥಿಗಳಲ್ಲಿ ಕಲಿಕೆಯ ಆಸಕ್ತಿ ಮತ್ತು ಮನೋಸ್ಥೈರ್ಯ ಹೆಚ್ಚಿಸುತ್ತಿದೆ.

ವಿಶೇಷ ತರಗತಿಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಊಟ ಹಾಗೂ ರಾತ್ರಿ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಜತೆಗೆ ಶಾಲೆಯಲ್ಲೇ ವಸತಿ ಸೌಲಭ್ಯವನ್ನೂ ಒದಗಿಸಲಾಗಿದೆ. ಮಕ್ಕಳ ಸುರಕ್ಷತೆ, ಆರೋಗ್ಯ ಹಾಗೂ ಕಲಿಕೆಗೆ ಅನುಕೂಲವಾಗುವಂತೆ ಶಿಕ್ಷಕರು ಅಗತ್ಯ ವ್ಯವಸ್ಥೆ ಮಾಡಿರುವುದು ಈ ವಿಶೇಷ ತರಗತಿಗಳ ಪ್ರಮುಖ ಅಂಶವಾಗಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಶಾಲೆಯ ಶಿಕ್ಷಕರು ತಮ್ಮ ರಜೆಯ ದಿನಗಳನ್ನೂ ಬದಿಗಿಟ್ಟು ಬೋಧನೆಯಲ್ಲಿ ತೊಡಗಿದ್ದಾರೆ. ತನು, ಮನದೊಂದಿಗೆ ಅಗತ್ಯ ಸಹಕಾರ ನೀಡುತ್ತಿರುವ ಶಿಕ್ಷಕರಿಗೆ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ), ಶಿಕ್ಷಣ ಪ್ರೇಮಿಗಳು ಹಾಗೂ ಪೋಷಕರು ಬೆಂಬಲವಾಗಿ ನಿಂತಿದ್ದಾರೆ. ಎಲ್ಲರ ಸಹಕಾರದಿಂದ ವಿಶೇಷ ತರಗತಿಗಳು ಯಶಸ್ವಿಯಾಗಿ ನಡೆಯುತ್ತಿವೆ.

ಶಾಲೆಯಲ್ಲಿ ವಿಷಯವಾರು ಶಿಕ್ಷಕರ ತಂಡ, ಸುಸಜ್ಜಿತ ತರಗತಿ ಕೊಠಡಿಗಳು, ಕಂಪ್ಯೂಟರ್ ಹಾಗೂ ವಿಜ್ಞಾನ ಪ್ರಯೋಗಾಲಯಗಳಿವೆ. ಎಐ ಶಿಕ್ಷಣ, ಸ್ಪೋಕನ್ ಇಂಗ್ಲಿಷ್ ತರಬೇತಿ ಮತ್ತು ಬಿಸಿಯೂಟದ ಸೌಲಭ್ಯವೂ ವಿದ್ಯಾರ್ಥಿಗಳಿಗೆ ಲಭ್ಯವಿದೆ. ಪಠ್ಯ ಶಿಕ್ಷಣದ ಜತೆಗೆ ತಂತ್ರಜ್ಞಾನ ಜ್ಞಾನ ಹಾಗೂ ಭಾಷಾ ಕೌಶಲ ಬೆಳೆಸುವ ಪ್ರಯತ್ನವೂ ಇಲ್ಲಿ ನಡೆಯುತ್ತಿದೆ.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಜತೆಗೆ 2025–26 ಹಾಗೂ 2026–27ನೇ ಸಾಲಿನ ಎಂಟನೇ ತರಗತಿ ವಿದ್ಯಾರ್ಥಿಗಳಿಗೂ ರಾಷ್ಟ್ರೀಯ ಆದಾಯ ಹಾಗೂ ಅರ್ಹತಾ ವಿದ್ಯಾರ್ಥಿವೇತನ ಯೋಜನೆ ಪರೀಕ್ಷೆಗೆ ಸಿದ್ಧತೆ ನಡೆಸಲು ದಸರಾ ರಜೆಯಲ್ಲಿ ವಿಶೇಷ ತರಗತಿಗಳನ್ನು ಆಯೋಜಿಸಲಾಗುತ್ತಿದೆ ಆರಂಭಿಕ ಹಂತದಲ್ಲೇ ವಿದ್ಯಾರ್ಥಿಗಳ ಸಾಮರ್ಥ್ಯ ಹೆಚ್ಚಿಸಿ, ವಿದ್ಯಾರ್ಥಿ ವೇತನ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಲು ಪ್ರೇರಣೆ ನೀಡಲಾಗುತ್ತಿದೆ.

> ಹತ್ತನೇ ತರಗತಿ ವಿದ್ಯಾರ್ಥಿಗಳ ಜೀವನದಲ್ಲಿ ಅತ್ಯಂತ ಮಹತ್ವದ ಘಟ್ಟ. ಅವರ ಭವಿಷ್ಯಕ್ಕೆ ಭದ್ರ ಅಡಿಪಾಯ ಹಾಕುವುದು ನಮ್ಮ ಕರ್ತವ್ಯ. ಶಾಲಾ ಶಿಕ್ಷಣ ಇಲಾಖೆಯ ಡಿಡಿಪಿಐ, ಬಿಇಒ, ಎಸ್‌ಡಿಎಂಸಿ ಅಧ್ಯಕ್ಷರು, ಶಿಕ್ಷಣ ಪ್ರೇಮಿಗಳು ಹಾಗೂ ಶಿಕ್ಷಕರ ಸಹಕಾರದಿಂದ ವಿಶೇಷ ತರಗತಿಗಳನ್ನು ಪ್ರತಿ ವರ್ಷ ಯಶಸ್ವಿಯಾಗಿ ನಡೆಸಲಾಗುತ್ತಿದೆ.
>
> – ಶರಣು ಪೂಜಾರ, ಮುಖ್ಯಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಮುಳಗುಂದ

> ಬೇಸಿಗೆ ಹಾಗೂ ದಸರಾ ರಜೆಯನ್ನು ನಮ್ಮ ಶಾಲೆಯ ಶಿಕ್ಷಕರು ಮಕ್ಕಳ ಭವಿಷ್ಯಕ್ಕಾಗಿ ಮೀಸಲಿಟ್ಟಿದ್ದಾರೆ. ರಜೆಯಲ್ಲೂ ನಿತ್ಯದ ತರಗತಿಗಳಂತೆ ಪಾಠ ಬೋಧನೆ ನಡೆಯುತ್ತಿರುವುದರಿಂದ ವಿದ್ಯಾರ್ಥಿಗಳ ಪ್ರಗತಿ ಕಂಡುಬಂದಿದೆ. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿದ್ದು, ಪೋಷಕರಲ್ಲೂ ಭರವಸೆ ಮೂಡಿದೆ.
>
> – ಮಹಾದೇವಪ್ಪ ಮಾನೇಗಾರ, ಎಸ್‌ಡಿಎಂಸಿ ಅಧ್ಯಕ್ಷರು.

> ಬೇಸಿಗೆ ಹಾಗೂ ದಸರಾ ರಜೆಯಲ್ಲಿ ವಿಶೇಷ ತರಗತಿಗಳ ಜತೆಗೆ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಿರುವ ಶಿಕ್ಷಕರ ಪರಿಶ್ರಮ ನನಗೆ ಉತ್ತಮ ಫಲಿತಾಂಶ ಪಡೆಯಲು ಸಹಕಾರಿಯಾಗಿದೆ.
>
> – ಹರೀಶ ಕೆಂಚನಾಯ್ಕರ, ಹಳೆ ವಿದ್ಯಾರ್ಥಿ

> ಜಿಲ್ಲೆಯ 324 ಪ್ರೌಢಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ವಿಶೇಷ ತರಗತಿಗಳನ್ನು ಆಯೋಜಿಸಲಾಗಿದೆ. ಮುಳಗುಂದ ಸರ್ಕಾರಿ ಪ್ರೌಢಶಾಲೆಯಲ್ಲಿ ಉಪಾಹಾರ, ಊಟ ಹಾಗೂ ವಸತಿ ಸಹಿತ ತರಗತಿಗಳನ್ನು ನಡೆಸುತ್ತಿರುವುದು ವಿಶೇಷ. ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ಮತ್ತು ಫಲಿತಾಂಶ ಸುಧಾರಣೆಗೆ ಶ್ರಮಿಸುತ್ತಿರುವ ಶಿಕ್ಷಕರ ವೃಂದ, ಎಸ್‌ಡಿಎಂಸಿ ಹಾಗೂ ಶಿಕ್ಷಣ ಪ್ರೇಮಿಗಳಿಗೆ ಶಿಕ್ಷಣ ಇಲಾಖೆಯ ಪರವಾಗಿ ಧನ್ಯವಾದಗಳು.
>
> – ಆರ್.ಎಸ್. ಬುರಡಿ, ಡಿಡಿಪಿಐ

## ಲಕ್ಷ್ಮೇಶ್ವರದಲ್ಲಿ ದಿ. ಎಚ್.ಸಿ. ರಟಗೇರಿ ಗುರುಸ್ಮರಣೆ

# ಗುರುಗಳ ಆದರ್ಶವೇ ಬದುಕಿಗೆ ದಾರಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗುರುಗಳು ವ್ಯಕ್ತಿಯ ಜೀವನದುದ್ದಕ್ಕೂ ಸ್ಮರಣೀಯರಾಗಿರುತ್ತಾರೆ. ಅವರು ನೀಡುವ ಜ್ಞಾನ, ಬಿತ್ತುವ ಸಂಸ್ಕಾರ ಹಾಗೂ ತೋರಿಸುವ ಬದುಕಿನ ದಾರಿ ಶಿಷ್ಯರ ವ್ಯಕ್ತಿತ್ವ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಅಲ್ಪ ಮಾನವನನ್ನು ವಿಶ್ವಮಾನವನನ್ನಾಗಿ ರೂಪಿಸುವುದೇ ಶಿಕ್ಷಣದ ನಿಜವಾದ ಉದ್ದೇಶ ಎಂದು ನರರೋಗ ತಜ್ಞ ಡಾ. ಎಸ್.ಪಿ. ಬಳಿಗಾರ ಹೇಳಿದರು.

ಪಟ್ಟಣದ ಸ್ಕೂಲ್ ಚಂದನದಲ್ಲಿ ದಿವಂಗತ ಎಚ್.ಸಿ. ರಟಗೇರಿ ಅವರ ಸ್ಮರಣಾರ್ಥ ಸ್ಕೂಲ್ ಚಂದನ ಹಾಗೂ ಎವಿಆರ್ ಫೌಂಡೇಷನ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಗುರುಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸರಿಯಾದ ದಿಕ್ಕು ತೋರಿಸಿ ಸಾಧನೆಯ ಹಾದಿಯಲ್ಲಿ ಮುನ್ನಡೆಸುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ವಿದ್ಯಾರ್ಥಿಗಳ ಸಾಧನೆಯ ಹಿಂದೆ ಶಿಕ್ಷಕರ ಮಾರ್ಗದರ್ಶನ, ಪ್ರೇರಣೆ ಹಾಗೂ ಮೌಲ್ಯಾಧಾರಿತ ಶಿಕ್ಷಣದ ಕೊಡುಗೆ ಮಹತ್ವದ್ದಾಗಿದೆ.

ಎಚ್.ಸಿ. ರಟಗೇರಿ ಅವರ ಶೈಕ್ಷಣಿಕ ಸೇವೆ, ಆದರ್ಶ ಹಾಗೂ ವ್ಯಕ್ತಿತ್ವ ಇಂದಿನ ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಬೇಕು. ಅವರ ಸಾಧನೆ ಹಾಗೂ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಸಮಾಜದ ಕರ್ತವ್ಯವಾಗಿದೆ ಎಂದರು.

ನಿವೃತ್ತ ನ್ಯಾಯಾಧೀಶ ಡಿ.ವೈ. ಬಸಾಪುರ ಮಾತನಾಡಿ, ಶಿಕ್ಷಕ ವೃತ್ತಿಯ ಘನತೆ ಮತ್ತು ಗೌರವಕ್ಕೆ ಮೆರಗು ನೀಡಿದವರು ಎಚ್.ಸಿ. ರಟಗೇರಿ ಗುರುಗಳು. ಸ್ಕೂಲ್ ಚಂದನದಲ್ಲಿ ಎರಡು ದಶಕಗಳಿಗೂ ಹೆಚ್ಚು ಕಾಲ ಯಾವುದೇ ಸಂಭಾವನೆ ಪಡೆಯದೆ ನಿರ್ದೇಶಕರಾಗಿ ಪ್ರಾಮಾಣಿಕ ಸೇವೆ ಸಲ್ಲಿಸುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಇಂತಹ ಗುರುಗಳ ಸೇವೆ ಮತ್ತು ಆದರ್ಶಗಳನ್ನು ಸ್ಮರಿಸುವುದು ಗುರುಪರಂಪರೆಗೆ ಸಲ್ಲಿಸುವ ಗೌರವವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಶಿಕ್ಷಕರಿಗೆ ಎಚ್.ಸಿ. ರಟಗೇರಿ ಎಕ್ಸಲೆನ್ಸ್ ಟೀಚರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶೈಕ್ಷಣಿಕ ಹಾಗೂ ಇತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಇಬ್ಬರು ವಿದ್ಯಾರ್ಥಿಗಳಿಗೆ ಎಕ್ಸಲೆನ್ಸ್ ಸ್ಟೂಡೆಂಟ್ಸ್ ಅವಾರ್ಡ್ ಪ್ರದಾನ ಮಾಡಲಾಯಿತು. ಶಿಕ್ಷಕರಾದ ವೀರಣ್ಣ ಶೆಟ್ಟರ, ಬಸಪ್ಪ ಹಲಗೊಂಡ, ಶಿವಾನಂದ ಬಡಿಗೇರ, ಇಬ್ರಾಹಿಂಸಾಬ್ ನಧಾಫ್ ಹಾಗೂ ಸಿದ್ಧಲಿಂಗೇಶ ಮರಿಗೌಡರ ಪ್ರಶಸ್ತಿ ಸ್ವೀಕರಿಸಿದರು. ವಿದ್ಯಾರ್ಥಿಗಳಾದ ಕು. ಭೀಮಶಿ ಹಾಗೂ ಕು. ದಿವ್ಯಾ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಂಸ್ಥೆಯ ಸಂಸ್ಥಾಪಕ ಟಿ. ಈಶ್ವರ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ವಿನೋದ ರಟಗೇರಿ, ಕಾರವಾರ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ ನಾವಿ, ಗಿರಿಜಾ ಈಶ್ವರ, ಸರಸ್ವತಿ ರಟಗೇರಿ, ರಮೇಶ ರಟಗೇರಿ, ಶಿವಾನಂದ ರಟಗೇರಿ ಹಾಗೂ ಪ್ರಾಂಶುಪಾಲ ರಾಮು ಭಾವನವರ ಸೇರಿದಂತೆ ಗಣ್ಯರು, ಶಿಕ್ಷಕರು, ಹಿರಿಯರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿದ್ಯಾರ್ಥಿಗಳಾದ ಪ್ರವೀಣ, ಪ್ರಿಯಾಂಕ, ವಚನಾ ಹಾಗೂ ಜಯರಾಜ ಕಾರ್ಯಕ್ರಮ ನಿರೂಪಿಸಿದರು.

> ಗುರುಗಳು ನೀಡುವ ಜ್ಞಾನ, ಬಿತ್ತುವ ಸಂಸ್ಕಾರ ಹಾಗೂ ತೋರಿಸುವ ಬದುಕಿನ ದಾರಿ ಶಿಷ್ಯರ ವ್ಯಕ್ತಿತ್ವ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಅಲ್ಪ ಮಾನವನನ್ನು ವಿಶ್ವಮಾನವನನ್ನಾಗಿ ರೂಪಿಸುವುದೇ ಶಿಕ್ಷಣದ ನಿಜವಾದ ಉದ್ದೇಶ.
>
> – ಡಾ. ಎಸ್.ಪಿ. ಬಳಿಗಾರ ನರರೋಗ ತಜ್ಞ

## ಧರ್ಮದಿಂದ ವಿಶ್ವಶಾಂತಿ ಸಾಧ್ಯ: ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರು

# ಧರ್ಮ, ಸಂಸ್ಕೃತಿ ಜಾಗೃತಿಗೆ ದುರ್ಗಾದೌಡ ಸಂಕಲ್ಪ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಧರ್ಮ, ಸಂಸ್ಕೃತಿ ಹಾಗೂ ಪರಂಪರೆಯ ಜಾಗೃತಿಯ ಸಂಕಲ್ಪದೊಂದಿಗೆ ಪಟ್ಟಣದಲ್ಲಿ ದುರ್ಗಾದೌಡ ಸಂಭ್ರಮ ಆರಂಭಗೊಂಡಿತು. ದಸರಾ ಮಹೋತ್ಸವದ ಅಂಗವಾಗಿ ದಸರಾ ಉತ್ಸವ ಸಮಿತಿ ಆಯೋಜಿಸಿರುವ ದುರ್ಗಾದೌಡ ಕಾರ್ಯಕ್ರಮಕ್ಕೆ ಭಾನುವಾರ ಬ್ರಾಹ್ಮೀ ಮುಹೂರ್ತದಲ್ಲಿ ಗ್ರಾಮದೇವತೆ ದ್ಯಾಮವ್ವ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು. ನೂರಾರು ಭಕ್ತರು ಪಾಲ್ಗೊಂಡು ಭಕ್ತಿಭಾವ ಮೆರೆದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿದ ಕರೆವಾಡಿ ಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರು, ಧರ್ಮ, ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸವನ್ನು ಮರೆಯದೆ ಮುಂದಿನ ಪೀಳಿಗೆಗೆ ಪರಿಚಯಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಧರ್ಮವನ್ನು ರಕ್ಷಿಸುವವರನ್ನು ಧರ್ಮವೇ ಕಾಪಾಡುತ್ತದೆ. ಬದುಕಿನಲ್ಲಿ ನೀತಿ, ಧರ್ಮ ಹಾಗೂ ನ್ಯಾಯಕ್ಕೆ ಆದ್ಯತೆ ನೀಡಬೇಕು ಎಂದರು.

ಲಿಂಗೈಕ್ಯ ಜಗದ್ಗುರು ವೀರಗಂಗಾಧರರು ಸಾರಿದಂತೆ ಮಾನವ ಧರ್ಮವೇ ಶ್ರೇಷ್ಠವಾಗಿದೆ. ಧರ್ಮದ ತಳಹದಿಯ ಮೇಲೆಯೇ ವಿಶ್ವಶಾಂತಿ ಸಾಧ್ಯ. ನವರಾತ್ರಿ ಉತ್ಸವವನ್ನು ಒಂಬತ್ತು ದಿನಗಳ ಕಾಲ ಪುರಾಣ ಪ್ರವಚನ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಆಚರಿಸುತ್ತಿರುವುದು ಭಕ್ತಿ ಮತ್ತು ಸಂಸ್ಕೃತಿಯ ಉಳಿವಿಗೆ ಪೂರಕವಾಗಿದೆ. ಇಂತಹ ಧಾರ್ಮಿಕ ಸಂದೇಶಗಳು ಶಾಶ್ವತವಾಗಿ ಉಳಿಯಲಿವೆ ಎಂದು ಹೇಳಿದರು.

ಮುಖಂಡ ಗುರುನಾಥ ದಾನಪ್ಪನವರ ಮಾತನಾಡಿ, ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸವನ್ನು ಯುವಪೀಳಿಗೆಗೆ ಪರಿಚಯಿಸಲು ಇಂತಹ ಕಾರ್ಯಕ್ರಮಗಳು ಅಗತ್ಯವಾಗಿವೆ. ಧರ್ಮೋ ರಕ್ಷತಿ ರಕ್ಷಿತಃ ಎಂಬ ತತ್ವದಂತೆ ಧಾರ್ಮಿಕ ಆಚರಣೆಗಳು ಧರ್ಮದ ತಳಹದಿಯ ಸಮಾಜ ನಿರ್ಮಾಣಕ್ಕೆ ನೆರವಾಗುತ್ತವೆ. ಸಮಾಜದಲ್ಲಿ ಧಾರ್ಮಿಕ ಮೌಲ್ಯಗಳನ್ನು ಹೆಚ್ಚಿಸುವುದು ಹಾಗೂ ಧರ್ಮಜಾಗೃತಿ ಮೂಡಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಯುವಕರನ್ನು ಸಂಘಟಿಸಿ ಪ್ರತಿ ವರ್ಷ ದುರ್ಗಾದೌಡ ಆಯೋಜಿಸುವ ಮೂಲಕ ಪಟ್ಟಣದ ವಿವಿಧ ದೇವಸ್ಥಾನಗಳಿಗೆ ತೆರಳಿ ಭಕ್ತಿ ಸಮರ್ಪಿಸಲಾಗುತ್ತಿದೆ. ಇಂತಹ ಕಾರ್ಯಕ್ರಮಗಳು ಯುವಜನತೆಯಲ್ಲಿ ಧಾರ್ಮಿಕ ಪ್ರಜ್ಞೆ, ಸಂಘಟನಾ ಶಕ್ತಿ ಹಾಗೂ ಸಂಸ್ಕೃತಿಯ ಮೇಲಿನ ಅಭಿಮಾನ ಬೆಳೆಸಲು ಸಹಕಾರಿಯಾಗಿವೆ ಎಂದು ಹೇಳಿದರು.

ದೊಡ್ಡ ದ್ಯಾಮವ್ವ ದೇವಸ್ಥಾನದಿಂದ ಆರಂಭವಾದ ದುರ್ಗಾದೌಡ ಶ್ರೀ ಕಾಳಿಕಾ, ಬಿಸಿ ರೊಟ್ಟಿ ಈರಣ್ಣ, ಕೋಡಿ ಎಲ್ಲಮ್ಮ ಹಾಗೂ ಗಾಳಿ ಬಸವೇಶ್ವರ ದೇವಸ್ಥಾನಗಳ ಮೂಲಕ ಸಾಗಿ ಹಳ್ಳದಕೇರಿಯ ಸಣ್ಣ ದ್ಯಾಮವ್ವ ದೇವಸ್ಥಾನದಲ್ಲಿ ಸಂಪನ್ನಗೊಂಡಿತು. ಮಾರ್ಗದುದ್ದಕ್ಕೂ ಮಹಿಳೆಯರು ರಂಗೋಲಿ ಹಾಕಿ ಭಕ್ತರನ್ನು ಸ್ವಾಗತಿಸಿದರು. ಸಣ್ಣ ದ್ಯಾಮವ್ವ ದೇವಸ್ಥಾನದ ಓಣಿಯ ವತಿಯಿಂದ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ರಾಘವೇಂದ್ರ ಪೂಜಾರ, ಬಸವರಾಜ ಅರಳಿ, ರವಿ ಲಿಂಗಶೆಟ್ಟಿ, ಶಿವಯೋಗಿ ಅಂಕಲಕೋಟಿ, ಶಂಕರ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಬಸವೇಶ ಮಹಾಂತಶೆಟ್ಟರ, ಗುರುರಾಜ ಪಾಟೀಲ, ಗಣೇಶ ಬನ್ನಿ, ಮಲ್ಲನಗೌಡ ಪಾಟೀಲ, ದ್ಯಾಮಣ್ಣ ಗಡೇದ, ಗಂಗಾಧರ ಪುರಾಣಿಕಮಠ, ಗುಡಗುಂಟಿ, ತಿಪ್ಪಣ್ಣ ಸಂಶಿ, ಪ್ರವೀಣ ಪಾಟೀಲ, ಶಿವನಗೌಡ ಪಾಟೀಲ ಸೇರಿದಂತೆ ಮಹಿಳೆಯರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

> ಧರ್ಮ, ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಪ್ರತಿಯೊಬ್ಬರ ಕರ್ತವ್ಯ. ಧರ್ಮದ ತಳಹದಿಯ ಮೇಲೆಯೇ ವಿಶ್ವಶಾಂತಿ ಸಾಧ್ಯ.
>
> – ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರು, ಕರೆವಾಡಿ ಮಠ

# ಅಂಬಾಭವಾನಿ ದೇವಸ್ಥಾನದಲ್ಲಿ ಶರನ್ನವರಾತ್ರಿಗೆ ಚಾಲನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಅಂಬಾಭವಾನಿ ದೇವಸ್ಥಾನದಲ್ಲಿ ಎಸ್‌ಎಸ್‌ಕೆ ಸಮಾಜದ ವತಿಯಿಂದ ಶರನ್ನವರಾತ್ರಿ ಅಂಗವಾಗಿ ಆಯೋಜಿಸಿರುವ ಧಾರ್ಮಿಕ ಕಾರ್ಯಕ್ರಮಗಳಿಗೆ ಶಾಸಕ ಡಾ. ಚಂದ್ರು ಲಮಾಣಿ ಹಾಗೂ ಸರೋಜಾ ಲಮಾಣಿ ದಂಪತಿ ಭಾನುವಾರ ಪೂಜೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಭಾರತವು ಭವ್ಯ ಪರಂಪರೆ ಹಾಗೂ ಇತಿಹಾಸ ಹೊಂದಿರುವ ಪವಿತ್ರ ದೇಶವಾಗಿದೆ. ಪ್ರತಿಯೊಂದು ಹಬ್ಬದ ಆಚರಣೆಯ ಹಿಂದೆ ಧಾರ್ಮಿಕ, ಐತಿಹಾಸಿಕ ಹಾಗೂ ವೈಜ್ಞಾನಿಕ ಹಿನ್ನೆಲೆಯಿದೆ. ಮಕ್ಕಳಿಗೆ ನಮ್ಮ ಸಂಸ್ಕೃತಿ, ಆಚಾರ–ವಿಚಾರಗಳ ಕುರಿತು ತಿಳುವಳಿಕೆ ನೀಡುವುದರ ಜತೆಗೆ ಧಾರ್ಮಿಕ ಆಚರಣೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವ ಮೂಲಕ ಧರ್ಮದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಅಂಬಾಭವಾನಿ ದೇವಸ್ಥಾನ ಸಮಿತಿ ಹಾಗೂ ಎಸ್‌ಎಸ್‌ಕೆ ಸಮಾಜದವರು ಆಯೋಜಿಸಿರುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ, ಅದರಲ್ಲೂ ಘಟಸ್ಥಾಪನೆಯ ಪರ್ವಕಾಲದಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆತಿರುವುದು ತಮ್ಮ ಕುಟುಂಬದ ಭಾಗ್ಯವಾಗಿದೆ ಎಂದು ಹೇಳಿದರು.

ಎಸ್‌ಎಸ್‌ಕೆ ಸಮಾಜದ ಉಪಾಧ್ಯಕ್ಷ ನಾರಾಯಣ ಪವಾರ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜದ ಅಧ್ಯಕ್ಷ ಪರಶುರಾಮಸಾ ಬದಿ ಅವರ ನೇತೃತ್ವದಲ್ಲಿ ಪುರಾತನ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಸಮಾಜ ಬಾಂಧವರು ಮುಂದಾಗಿದ್ದಾರೆ. ವಿವಿಧ ಸಮಾಜಗಳೊಂದಿಗಿನ ಉತ್ತಮ ಬಾಂಧವ್ಯದಿಂದ ಎಲ್ಲರೂ ನಿರ್ಮಾಣ ಕಾರ್ಯಕ್ಕೆ ಕೈಜೋಡಿಸಿದ್ದಾರೆ ಎಂದರು.

ಶರನ್ನವರಾತ್ರಿ ಅಂಗವಾಗಿ ದೇವಸ್ಥಾನದಲ್ಲಿ ಪ್ರತಿದಿನ ಕಾಕಡಾರತಿ, ವಿಶೇಷ ಪೂಜೆ, ಪಾರಾಯಣ, ಪುರಾಣ ಪಠಣ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಎಸ್‌ಕೆ ಸಮಾಜದ ಅಧ್ಯಕ್ಷ ಪರಶುರಾಮಸಾ ಬದಿ ವಹಿಸಿದ್ದರು. ಲಕ್ಷ್ಮಣಸಾ ರಾಜೋಳಿ, ಶಾಂತಾಬಾಯಿ ಪವಾರ, ಸರೋಜಾ ಚಂದ್ರು ಲಮಾಣಿ, ಎಸ್‌ಎಸ್‌ಕೆ ಸಮಾಜ ಟ್ರಸ್ಟ್ ಸಮಿತಿ, ಎಸ್‌ಎಸ್‌ಕೆ ತರುಣ ಸಂಘ, ಮಹಿಳಾ ಮಂಡಳಿ, ಭಾವಸಾರ ಕ್ಷತ್ರಿಯ ಸಮಾಜ ಹಾಗೂ ಗೋಂದಳಿ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ರಂಗು ಬದಿ ಸ್ವಾಗತಿಸಿದರು. ತರುಣ ಸಂಘದ ಅಧ್ಯಕ್ಷ ಭರತ ಬಾಕಳೆ ನಿರೂಪಿಸಿದರು.

# ಪೌಷ್ಟಿಕ ಆಹಾರ, ಆರೋಗ್ಯಕರ ಬದುಕಿಗೆ ಆದ್ಯತೆ

**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ತಾಲೂಕಿನ ಬೈರನಹಟ್ಟಿಯ ದೊರೆಸ್ವಾಮಿ ವಿರಕ್ತಮಠದಲ್ಲಿ ಪೋಷಣ್ ಮಾಸಾಚರಣೆ ಸಮಾರೋಪ ಸಮಾರಂಭ ನಡೆಯಿತು. ಬೈರನಹಟ್ಟಿಯ ಮನಿಪ್ರ ಶಾಂತಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮ ಉದ್ಘಾಟಿಸಿದರು.



ಜಿಲ್ಲಾ ನಿರೂಪಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಮಾತನಾಡಿ, ದೇಶೀಯ ಹಾಗೂ ಸಾಂಪ್ರದಾಯಿಕ ಆಹಾರ ಪದ್ಧತಿಗೆ ಆದ್ಯತೆ ನೀಡಿ, ಪೌಷ್ಟಿಕ ಆಹಾರ ಸೇವನೆಗೆ ಸಮಯ ಮೀಸಲಿಡಬೇಕು. ನರಗುಂದ ತಾಲೂಕಿನಲ್ಲಿ ತಿಂಗಳಾದ್ಯಂತ ಪೋಷಣ್ ಮಾಸಾಚರಣೆ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಶ್ಲಾಘನೀಯ ಎಂದರು.

ಮನಿಪ್ರ ಶಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ, ನಮ್ಮ ಆಚಾರ, ವಿಚಾರ ಹಾಗೂ ಪರಂಪರೆಯಲ್ಲಿ ಆಹಾರ ಪದ್ಧತಿಗೆ ಮಹತ್ವದ ಸ್ಥಾನವಿದೆ. ಆರೋಗ್ಯಕರ ಬದುಕಿಗೆ ಆಹಾರ ಮತ್ತು ವಿಹಾರ ಪದ್ಧತಿ ಮುಖ್ಯವಾಗಿದ್ದು, ಸಾಂಪ್ರದಾಯಿಕ ಆಹಾರದ ಮಹತ್ವ ಅರಿಯಬೇಕು ಎಂದರು.

ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಬಯಕೆಯ ಬುತ್ತಿ ನೀಡಿ ಸೀಮಂತ ನೆರವೇರಿಸಲಾಯಿತು. ರಂಗೋಲಿ ಮೂಲಕ ಇಲಾಖೆಯ ಯೋಜನೆಗಳ ಕುರಿತು ಜಾಗೃತಿ ಮೂಡಿಸಲಾಯಿತು. ಪೌಷ್ಟಿಕ ಆಹಾರ ಸ್ಪರ್ಧೆ ಆಯೋಜಿಸಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಪೌಷ್ಟಿಕ ಕೈತೋಟಕ್ಕೆ ಉತ್ತೇಜನ ನೀಡಲು ಸಕ್ಷಮ್ ಅಂಗನವಾಡಿಗಳಿಗೆ ಗ್ರೋ ಬ್ಯಾಗ್‌ಗಳನ್ನು ವಿತರಿಸಲಾಯಿತು.

ಎಸ್.ಬಿ. ದಂಡಿನ, ಬಿ.ಬಿ. ಐನಾಪೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಪ್ಪ ಗಿರಿತಿಮ್ಮಣ್ಣವರ, ಮೇಲ್ವಿಚಾರಕಿಯರಾದ ಭಾರತಿ ಕಾಲಚಟ್ಟಿ, ಪರಿಮಳಾ ಹೂಗಾರ, ಶಕುಂತಲಾ ಗಣಿ, ಮಂಜುನಾಥ ಗುಗ್ಗರಿ, ಪವನ್ ಕಾಟೀಗಾರ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ತಾಯಂದಿರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು. ಬೇಬಿ ದೊಡ್ಡಮನಿ ನಿರೂಪಿಸಿದರು. ಶಿವಲೀಲಾ ಹಿರೇಮಠ ವಂದಿಸಿದರು.

# ಇಂದು ದಸರಾ ಕಾವ್ಯೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ, ಹೊಳೆಆಲೂರ ಹಾಗೂ ಭಾರತೀಯ ದಲಿತ ಸಾಹಿತ್ಯ ಅಕಾಡೆಮಿಯ ಗದಗ ಜಿಲ್ಲಾ ಶಾಖೆಯ ಸಹಯೋಗದಲ್ಲಿ ಅ. 13ರಂದು ಮಂಗಳವಾರ ಬೆಳಿಗ್ಗೆ 10.30ಕ್ಕೆ ನಗರದ ಹಾತಲಗೇರಿ ನಾಕದ ಹಾಲಕೇರಿ ಮಠದ ಅನ್ನದಾನೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ದಸರಾ ಕಾವ್ಯೋತ್ಸವ–2026 ಆಯೋಜಿಸಲಾಗಿದೆ.

ರಾಜ್ಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಡಿ.ಎಚ್. ಪರಂಗಿ ಉದ್ಘಾಟಿಸಲಿದ್ದು, ಬಸವರಾಜ ಎಂ. ಕಡೆಮನಿ ಅಧ್ಯಕ್ಷತೆ ವಹಿಸಲಿದ್ದಾರೆ. ರೇಣುಕಾ ಮಾದರ ಅವರ 'ಕಣ್ಣಂಚಿನ ಕಾವ್ಯ' ಪುಸ್ತಕ ಬಿಡುಗಡೆ ಹಾಗೂ ಮಾತೋಶ್ರೀ ಫೌಂಡೇಶನ್‌ನ ಲೋಗೊ ಅನಾವರಣ ನಡೆಯಲಿದೆ.

ವಿವಿಧ ಕ್ಷೇತ್ರಗಳ ಸಾಧಕರಾದ ಪ್ರಲ್ಹಾದ ಮುಡಾಸದ, ವಿನೋದ ಸಿ. ಪಟೇಲ್, ಎಂ.ಎಸ್. ಶೀಲವಂತ, ಮೀನಾಕ್ಷಿ ಶಿ. ಬೆನಕಣ್ಣವರ, ಶಕುಂತಲಾ ಎಚ್. ಅಕ್ಕಿ ಹಾಗೂ ಮಂಜುಳಾ ಚ. ಅಕ್ಕಿ ಅವರಿಗೆ ದಸರಾ ಸಾಧಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ದಸರಾ ನಾದಕುಂಚ ಸಂಭ್ರಮದ ಜತೆಗೆ ಕವಿಗೋಷ್ಠಿ ನಡೆಯಲಿದ್ದು, ಸುಮಾರು 35 ಕವಿಗಳು ಸ್ವರಚಿತ ಕವನಗಳನ್ನು ವಾಚಿಸಲಿದ್ದಾರೆ.

ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸಂಸ್ಥೆಯ ಕಾರ್ಯದರ್ಶಿ ನೀಲವ್ವ ತಳವಾರ ತಿಳಿಸಿದ್ದಾರೆ.

## ಅಂಚೆ ಸಪ್ತಾಹದ ಸೌಲಭ್ಯ ಸದ್ಬಳಕೆ ಮಾಡಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಅಂಚೆ ಸಪ್ತಾಹವು ಅ. 9ರಿಂದ 15ರವರೆಗೆ ನಡೆಯುತ್ತಿದ್ದು, ಜಿಲ್ಲೆಯ ವಿವಿಧ ಅಂಚೆ ಕಚೇರಿಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಜನರು ಈ ಸೌಲಭ್ಯಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್. ಎಸ್. ಶಿರಹಟ್ಟಿ ಕರೆ ನೀಡಿದ್ದಾರೆ.

ವಿಶ್ವ ಅಂಚೆ ದಿನದ ಅಂಗವಾಗಿ 'ಒಂದು ಅಂಚೆ ಜಾಲ, ಅನಂತ ಸಾಧ್ಯತೆಗಳು' ಎಂಬ ಆಶಯದೊಂದಿಗೆ ವಿವಿಧ ವಿಷಯಾಧಾರಿತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇದರೊಂದಿಗೆ ಜಿಲ್ಲೆಯ ವಿವಿಧ ಅಂಚೆ ಕಚೇರಿಗಳಲ್ಲಿ ಉಳಿತಾಯ ಖಾತೆ ತೆರೆಯುವಿಕೆ, ಸುಕನ್ಯಾ ಸಮೃದ್ಧಿ ಯೋಜನೆ ಹಾಗೂ ಆಧಾರ್ ನೋಂದಣಿ ಶಿಬಿರಗಳನ್ನೂ ಹಮ್ಮಿಕೊಳ್ಳಲಾಗಿದೆ.

ಸಣ್ಣ ಸುದ್ದಿಗಳು

## ಕಾಳಿಕಾದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ 54ನೇ ವರ್ಷದ ಶರನ್ನವರಾತ್ರಿ ಉತ್ಸವ ಭಕ್ತಿಭಾವದಿಂದ ಮುಂದುವರಿದಿದೆ. ಅ. 11ರಿಂದ ಆರಂಭಗೊಂಡ ಉತ್ಸವ ಅ. 20ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ಉತ್ಸವದ ಅಂಗವಾಗಿ ಪ್ರತಿದಿನ ದೇವಿಗೆ ಅಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ ಹಾಗೂ ದೇವಿ ಚರಿತಾಮೃತ ಪ್ರವಚನ ನಡೆಯುತ್ತಿವೆ. ಅ. 15ರಂದು ಸಹಸ್ರ ಕುಂಕುಮಾರ್ಚನೆ, 16ರಂದು ಸರಸ್ವತಿ ಪೂಜೆ ಮತ್ತು ಮಕ್ಕಳಿಗೆ ಅಕ್ಷರಾಭ್ಯಾಸ, 17ರಂದು ಮಹಾಲಕ್ಷ್ಮೀ ಪೂಜೆ, 18ರಂದು ದುರ್ಗಾಷ್ಟಮಿ ಅಂಗವಾಗಿ ಉಡಿ ತುಂಬುವ ಕಾರ್ಯಕ್ರಮ ಹಾಗೂ ಅನ್ನಸಂತರ್ಪಣೆ, 19ರಂದು ನವಕನ್ಯೆಯರ ಪೂಜೆ ಮತ್ತು ಆಯುಧ ಪೂಜೆ ಜರುಗಲಿವೆ.

ಅ. 20ರಂದು ವಿಜಯದಶಮಿ ಪ್ರಯುಕ್ತ ಸಂಜೆ 4.30ಕ್ಕೆ ವಿವಿಧ ವಾದ್ಯವೃಂದಗಳೊಂದಿಗೆ ಕಾಳಿಕಾದೇವಿಯ ಪಲ್ಲಕ್ಕಿ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ಬಳಿಕ ಶಮೀಪೂಜೆ, ಸೀಮೋಲ್ಲಂಘನೆ ಹಾಗೂ ಪುರಾಣದ ಮಹಾಮಂಗಲ ಕಾರ್ಯಕ್ರಮ ನಡೆಯಲಿದೆ.

ಉತ್ಸವದ ಅವಧಿಯಲ್ಲಿ ಅನ್ನಸಂತರ್ಪಣೆ ಮತ್ತು ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿದೆ. ಕಾಳಿಕಾದೇವಿ ಟ್ರಸ್ಟ್ ಕಮಿಟಿ ಹಾಗೂ ನವರಾತ್ರಿ ಸಮಿತಿಯ ಪದಾಧಿಕಾರಿಗಳು ಉತ್ಸವದ ನೇತೃತ್ವ ವಹಿಸಿದ್ದಾರೆ.

## ನಿಧನ

### ಹುಚ್ಚಪ್ಪ ಬಾಬರಿ

**ಗದಗ:** ತಾಲೂಕಿನ ತಿಮ್ಮಾಪೂರ ಗ್ರಾಮದ ನಿವಾಸಿ ಹುಚ್ಚಪ್ಪ ದಂಡಪ್ಪ ಬಾಬರಿ (84) ಅವರು ಅ. 11ರ ಭಾನುವಾರ ನಿಧನರಾದರು.



ಮೃತರು ರೈತ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಸೇರಿದಂತೆ ಮಕ್ಕಳು, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆ ಅ. 12ರಂದು ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮ ತಿಮ್ಮಾಪೂರದಲ್ಲಿ ನೆರವೇರಿತು.

## ಅ. 15ರಂದು ಉಚಿತ ಕಣ್ಣಿನ ತಪಾಸಣಾ ಶಿಬಿರ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ವತಿಯಿಂದ ಅ. 15ರಂದು ಗುರುವಾರ ಬೆಳಿಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ನಗರದ ಹಳೇ ಕೋರ್ಟ್ ಹತ್ತಿರದ ಲಯನ್ಸ್ ಭವನದಲ್ಲಿ ಉಚಿತ ಕಣ್ಣಿನ ತಪಾಸಣೆ, ಕಣ್ಣಿನ ಆರೈಕೆ ಹಾಗೂ ನೇತ್ರದಾನದ ಮಹತ್ವದ ಕುರಿತು ಶಿಬಿರ ಆಯೋಜಿಸಲಾಗಿದೆ.

ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನೇತ್ರತಜ್ಞರ ತಂಡದ ಸಹಯೋಗದಲ್ಲಿ ಶಿಬಿರ ನಡೆಯಲಿದೆ. ಸಾರ್ವಜನಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಕ್ಲಬ್ ಮನವಿ ಮಾಡಿದೆ.

ಹೆಚ್ಚಿನ ಮಾಹಿತಿಗಾಗಿ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ (9448165290) ಅಥವಾ ಕಾರ್ಯದರ್ಶಿ ಲಿಂಗರಾಜ ತೋಟದ (9845352690) ಅವರನ್ನು ಸಂಪರ್ಕಿಸಬಹುದು.

### ಪೂಜೆ, ಮೆರವಣಿಗೆಯೊಂದಿಗೆ ಕೋತಿಗೆ ಅಂತಿಮ ವಿದಾಯ

# ಮೂಕಜೀವಿಗೂ ಮಿಡಿದ ಮಾನವೀಯತೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಾತೇ ಬಾರದ ಮೂಕಜೀವಿಯ ಸಾವಿಗೂ ಮನ ಮಿಡಿದು, ಅದಕ್ಕೆ ಗೌರವಯುತ ಅಂತಿಮ ವಿದಾಯ ಸಲ್ಲಿಸಿದ ಅಪರೂಪದ ಘಟನೆ ಗದಗ ಜಿಲ್ಲೆಯ ಜಕ್ಕಲಿ ಗ್ರಾಮದಲ್ಲಿ ನಡೆದಿದೆ.

ಗಾಯಗೊಂಡು ಮೃತಪಟ್ಟ ಕರೆಮಂಗವೊಂದಕ್ಕೆ ಗ್ರಾಮಸ್ಥರು ಪೂಜೆ ಸಲ್ಲಿಸಿ, ಡೊಳ್ಳಿನ ವಾದ್ಯಗಳೊಂದಿಗೆ ಮೆರವಣಿಗೆ ನಡೆಸಿ ಅಂತ್ಯಸಂಸ್ಕಾರ ನೆರವೇರಿಸುವ ಮೂಲಕ ಮಾನವೀಯತೆಯ ಮೌಲ್ಯವನ್ನು ಎತ್ತಿಹಿಡಿದಿದ್ದಾರೆ.

ಗ್ರಾಮದ ಮೆಣಸಿಗಿಯವರ ಓಣಿಯ ಪ್ರಕಾಶ ಜೋಗಿಯವರ ಮನೆಯ ಮುಂದೆ ಗಾಯಗೊಂಡ ಸ್ಥಿತಿಯಲ್ಲಿದ್ದ ಕರೆಮಂಗ ಭಾನುವಾರ ಬೆಳಗ್ಗೆ ಮೃತಪಟ್ಟಿತು. ಮಂಗ ಅನಾರೋಗ್ಯದಿಂದ ಬಳಲುತ್ತಿರುವುದನ್ನು ಗಮನಿಸಿದ್ದ ಪ್ರಕಾಶ ಜೋಗಿಯವರು ಶನಿವಾರ ಅದಕ್ಕೆ ನೀರು ಕುಡಿಸಿ, ಆಹಾರ ನೀಡಿ ಆರೈಕೆ ಮಾಡಿದ್ದರು.



ವಿಷಯ ತಿಳಿದ ಶ್ರೀ ಬಸವೇಶ್ವರ ಭಜನಾ ಮಂಡಳಿ ಹಾಗೂ ನಟ ವಜ್ರಮುನಿ ಅಭಿಮಾನಿ ಬಳಗದವರು ಸ್ಥಳೀಯ ವೈದ್ಯರನ್ನು ಕರೆಸಿ, ಅವರ ಸಲಹೆಯಂತೆ ಔಷಧೋಪಚಾರವನ್ನೂ ಕೊಡಿಸಿದ್ದರು. ಆದರೂ ಮಂಗವನ್ನು ಬದುಕಿಸಿಕೊಳ್ಳಲು ಸಾಧ್ಯವಾಗಲಿಲ್ಲ.

ಮೂಕಜೀವಿಯ ಸಾವಿನಿಂದ ಮನನೊಂದ ಓಣಿಯ ನಿವಾಸಿಗಳು ಹಾಗೂ ಭಕ್ತರು ಒಂದೆಡೆ ಸೇರಿ ಪೂಜೆ ಸಲ್ಲಿಸಿದರು. ಬಳಿಕ ಡೊಳ್ಳಿನ ವಾದ್ಯಗಳೊಂದಿಗೆ ಮೆರವಣಿಗೆ ನಡೆಸಿ, ಪಟಾಕಿ ಸಿಡಿಸುತ್ತಾ 'ಜೈ ಶ್ರೀರಾಮ್' ಘೋಷಣೆ ಕೂಗಿದರು. ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದ ಮುಂದೆ ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿ, ಕರೆಮಂಗವನ್ನು ದಫನ ಮಾಡಿದರು. ಅಂತ್ಯಸಂಸ್ಕಾರದ ವೆಚ್ಚಕ್ಕಾಗಿ ಗ್ರಾಮಸ್ಥರು ಸ್ವಯಂಪ್ರೇರಣೆಯಿಂದ ಕಾಣಿಕೆಯನ್ನೂ ಸಂಗ್ರಹಿಸಿದರು.

ಗಾಯಗೊಂಡ ಮಂಗಕ್ಕೆ ಆರೈಕೆ ನೀಡುವುದರಿಂದ ಹಿಡಿದು, ಅದರ ಅಂತಿಮ ಸಂಸ್ಕಾರದಲ್ಲಿ ಕೈಜೋಡಿಸುವವರೆಗೆ ಗ್ರಾಮಸ್ಥರು ತೋರಿದ ಕಾಳಜಿ ಎಲ್ಲರ ಗಮನ ಸೆಳೆಯಿತು. ಮನುಷ್ಯರಷ್ಟೇ ಅಲ್ಲ, ಪ್ರಕೃತಿಯ ಮಡಿಲಲ್ಲಿ ಬದುಕುವ ಪ್ರಾಣಿಗಳಿಗೂ ನೋವಿದೆ, ಜೀವಿಸುವ ಹಕ್ಕಿದೆ ಎಂಬುದನ್ನು ಜಕ್ಕಲಿಯ ಜನರು ತಮ್ಮ ಕಾರ್ಯದ ಮೂಲಕ ಸಾರಿದ್ದಾರೆ.

### ಕರುಣೆಗೆ ಭಾಷೆಯ ಹಂಗಿಲ್ಲ

ಮೂಕಜೀವಿಗಳಿಗೆ ಮಾತು ಬಾರದಿರಬಹುದು.ಆದರೆ ಅವುಗಳಿಗೂ ನೋವಿದೆ, ಬದುಕುವ ಹಕ್ಕಿದೆ. ಅವುಗಳ ಸಂಕಟವನ್ನು ಅರ್ಥಮಾಡಿಕೊಂಡು ಪ್ರೀತಿ, ಕರುಣೆ ತೋರುವುದು ಮನುಷ್ಯತ್ವದ ನಿಜವಾದ ಅರ್ಥ. ಜಕ್ಕಲಿ ಗ್ರಾಮಸ್ಥರು ಕರೆಮಂಗಕ್ಕೆ ಸಲ್ಲಿಸಿದ ಅಂತಿಮ ಗೌರವ, ಜೀವದ ಮೇಲಿನ ಪ್ರೀತಿ ಮತ್ತು ಮಾನವೀಯ ಮೌಲ್ಯಗಳಿಗೆ ಸಾಕ್ಷಿಯಾಗಿದೆ.

## ಹೆಣ್ಣುಮಕ್ಕಳಿಗೆ ಕರಾಟೆಯೇ ಆತ್ಮರಕ್ಷಣೆಯ ಕವಚವಾಗಲಿ

**ವಿಜಯಸಾಕ್ಷಿ ಸುದ್ದಿ,ಹಗರಿಬೊಮ್ಮನಹಳ್ಳಿ**

ಹೆಣ್ಣುಮಕ್ಕಳು ಆತ್ಮವಿಶ್ವಾಸದಿಂದ ಬದುಕಿ, ಸವಾಲುಗಳನ್ನು ಧೈರ್ಯದಿಂದ ಎದುರಿಸುವ ಸಾಮರ್ಥ್ಯ ಬೆಳೆಸಿಕೊಳ್ಳಲು ಕರಾಟೆ ತರಬೇತಿ ಅತ್ಯವಶ್ಯಕ. ಆತ್ಮರಕ್ಷಣೆಯ ಅರಿವು ಮೂಡಿಸುವ ಇಂತಹ ತರಬೇತಿ ಹೆಣ್ಣುಮಕ್ಕಳಿಗೆ ರಕ್ಷಾಕವಚವಾಗಲಿ ಎಂದು ಕೆ. ಕೃಷ್ಣಮೂರ್ತಿ ಹೇಳಿದರು.

ಪಟ್ಟಣದ ಹಳೇ ಹಗರಿಬೊಮ್ಮನಹಳ್ಳಿಯ ನೀರಾವರಿ ಇಲಾಖೆ ಆವರಣದಲ್ಲಿ ಕರ್ನಾಟಕ ಟ್ರೆಡಿಷನಲ್ ಶೋಟೋಕಾನ್ ಕರಾಟೆ ಅಕಾಡೆಮಿಯ ತಾಲೂಕು ಸಂಘಟನೆಯ ವತಿಯಿಂದ, ಮಾಸ್ಟರ್ ಶುಭಾಷ್ ಚಂದ್ರ ಮುತ್ಕೂರು ಅವರ ನೇತೃತ್ವದಲ್ಲಿ ತಾಲೂಕಿನಲ್ಲಿಯೇ ಪ್ರಥಮ ಬಾರಿಗೆ ಹೆಣ್ಣುಮಕ್ಕಳಿಗಾಗಿ ಪ್ರತ್ಯೇಕವಾಗಿ ಆರಂಭಿಸಲಾದ ಕರಾಟೆ ತರಬೇತಿ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಶಿಕ್ಷಣ ಜ್ಞಾನದ ಬೆಳವಣಿಗೆಗೆ ನೆರವಾದರೆ, ಕರಾಟೆ ದೈಹಿಕ ಸಾಮರ್ಥ್ಯ, ಮಾನಸಿಕ ಸ್ಥೈರ್ಯ ಹಾಗೂ ಆತ್ಮರಕ್ಷಣೆಯ ಕೌಶಲವನ್ನು ಹೆಚ್ಚಿಸುತ್ತದೆ. ಶಿಸ್ತು, ಏಕಾಗ್ರತೆ ಮತ್ತು ಸಮಯಪ್ರಜ್ಞೆಯನ್ನೂ ಬೆಳೆಸುವ ಈ ಕಲೆಯನ್ನು ಹೆಣ್ಣುಮಕ್ಕಳು ಕೇವಲ ಕ್ರೀಡೆಯಾಗಿ ನೋಡದೆ, ಜೀವನದ ಸವಾಲುಗಳನ್ನು ಎದುರಿಸುವ ಸಾಧನವಾಗಿ ಸ್ವೀಕರಿಸಬೇಕು. ಪೋಷಕರು ಮಕ್ಕಳ ಆಸಕ್ತಿಗೆ ಪ್ರೋತ್ಸಾಹ ನೀಡಿ, ಶಿಕ್ಷಣದ ಜತೆಗೆ ಕರಾಟೆ ತರಬೇತಿ ಪಡೆಯಲು ಅವಕಾಶ ಕಲ್ಪಿಸಬೇಕು ಎಂದು ಟ್ರೆಡಿಷನಲ್ ಶೋಟೋಕಾನ್ ಕರಾಟೆ ಕರ್ನಾಟಕದ ತಾಂತ್ರಿಕ ನಿರ್ದೇಶಕ ಹಾಗೂ ಹಿರಿಯ ತರಬೇತುದಾರ ಮಾಸ್ಟರ್ ಶುಭಾಷ್ ಚಂದ್ರು ಮುತ್ಕೂರು ತಿಳಿಸಿದರು.

ಹೆಣ್ಣುಮಕ್ಕಳು ಎಲ್ಲ ಕ್ಷೇತ್ರಗಳಲ್ಲೂ ಆತ್ಮವಿಶ್ವಾಸದಿಂದ ಮುನ್ನಡೆಯಲು ಕುಟುಂಬ, ಶಿಕ್ಷಣ ಸಂಸ್ಥೆಗಳು ಹಾಗೂ ಸಮಾಜ ಸಹಕರಿಸಬೇಕು. ಆತ್ಮರಕ್ಷಣೆಯ ತರಬೇತಿ ಅವರಲ್ಲಿ ಧೈರ್ಯ ಮತ್ತು ಸ್ವಾವಲಂಬನೆಯ ಮನೋಭಾವ ಬೆಳೆಸುವುದರ ಜತೆಗೆ ಇತರರಿಗೂ ಪ್ರೇರಣೆಯಾಗಲಿದೆ ಎಂದು ಕರಾಟೆ ಸಂಘಟನೆಯ ತಾಲೂಕು ಅಧ್ಯಕ್ಷ ವಿಶ್ವನಾಥ್ ಬಾವಿಕಟ್ಟಿ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಹಿರಿಯರಾದ ಮುತ್ತಪ್ಪ, ಕರಾಟೆ ತರಬೇತುದಾರ ನಾಗರಾಜ್, ಮಹಿಳಾ ತರಬೇತುದಾರರಾದ ಅಂಬಮ್ಮ ಮತ್ತು ಮುತ್ತಮ್ಮ, ಪೋಷಕರಾದ ಶ್ರೀನಿವಾಸ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಅಂಬಾಭವಾನಿ ದಸರಾ ಉತ್ಸವದ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದ ಶ್ರೀ ಅಂಬಾಭವಾನಿ ದೇವಸ್ಥಾನ ಸೇವಾ ಸಮಿತಿ ವತಿಯಿಂದ ನೂತನ ಅಂಬಾಭವಾನಿ ದೇವಸ್ಥಾನದಲ್ಲಿ ದಸರಾ ಹಾಗೂ ಶರನ್ನವರಾತ್ರಿ ಉತ್ಸವ ಭಕ್ತಿಭಾವದಿಂದ ಮುಂದುವರಿದಿದೆ. ಅ. 21ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಉತ್ಸವದ ಅಂಗವಾಗಿ ಪ್ರತಿದಿನ ಕಾಕಡಾರತಿ, ಭಜನೆ, ಮಹಾಮಂಗಳಾರತಿ ಹಾಗೂ ಉಡಿ ತುಂಬುವ ಕಾರ್ಯಕ್ರಮಗಳು ಜರುಗುತ್ತಿವೆ. ಅ. 20ರಂದು ವಿಜಯದಶಮಿ ಪ್ರಯುಕ್ತ ಪ್ರವಚನ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ, ಸಾಮೂಹಿಕ ಬನ್ನಿ ಮುಡಿಯುವುದು, ದಾಂಡಿಯಾ ಹಾಗೂ ಸೀಮೋಲ್ಲಂಘನೆ ನಡೆಯಲಿವೆ.



ಅ. 26ರಂದು ಹುಣ್ಣಿಮೆ ಪ್ರಯುಕ್ತ ಶ್ರೀಚಕ್ರ ಕುಂಕುಮಾರ್ಚನೆ ಹಾಗೂ ಅಂಬಾಭವಾನಿ ದೇವಿಯ ಪಲ್ಲಕ್ಕಿ ಉತ್ಸವ ಆಯೋಜಿಸಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ದೇವಸ್ಥಾನ ಸೇವಾ ಸಮಿತಿ ಕೋರಿದೆ.

### ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯಿಂದ 'ಜೀವನ ದರ್ಶನ' ಉಪನ್ಯಾಸ

## ಹಬ್ಬಗಳು ಸಂಸ್ಕೃತಿ, ಸಾಮರಸ್ಯದ ಸಂಕೇತಗಳು




ಹಬ್ಬಗಳ ಆಚರಣೆಯ ಮೂಲಕ ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಮಾನವೀಯ ಮೌಲ್ಯಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ತಲುಪಿಸಬೇಕು. ಸಹಬಾಳ್ವೆ, ಸಮಾನತೆ ಮತ್ತು ಸಾಮರಸ್ಯದ ಬದುಕಿಗೆ ಎಲ್ಲರೂ ಆದ್ಯತೆ ನೀಡಬೇಕು.

– ಶಾಂತಲಿಂಗ ಮಹಾಸ್ವಾಮಿಗಳು
ಶಿರೋಳ-ಭೈರನಹಟ್ಟಿ
ತೋಂಟದಾರ್ಯ ಮಠ

**ವಿಜಯಸಾಕ್ಷಿ ಸುದ್ದಿ, ಗದಗ**

ಹಬ್ಬ-ಹರಿದಿನಗಳು ಕೇವಲ ಧಾರ್ಮಿಕ ಆಚರಣೆಗಳಲ್ಲ. ಅವು ಮಾನವೀಯ ಮೌಲ್ಯ, ಸಹೋದರತ್ವ ಮತ್ತು ಸಾಂಸ್ಕೃತಿಕ ಪರಂಪರೆಯ ಸಂಕೇತಗಳಾಗಿವೆ. ಹಬ್ಬಗಳ ಮೂಲ ಆಶಯವನ್ನು ಅರಿತು, ಅವುಗಳ ಪಾವಿತ್ರ್ಯವನ್ನು ಉಳಿಸಿಕೊಂಡು ಮುಂದಿನ ಪೀಳಿಗೆಗೆ ಸಂಸ್ಕಾರ ನೀಡಬೇಕು ಎಂದು ಶಿರೋಳ-ಭೈರನಹಟ್ಟಿಯ ತೋಂಟದಾರ್ಯ ಮಠ ಹಾಗೂ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಆಯೋಜಿಸಿದ್ದ 'ಜೀವನ ದರ್ಶನ' 63ನೇ ಮಾಲಿಕೆ ಹಾಗೂ ಕಾಶೀ ವಿಶ್ವನಾಥನ ಪಲ್ಲಕ್ಕಿ ಸೇವೆ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

12ನೇ ಶತಮಾನದ ಬಸವಾದಿ ಶಿವಶರಣರು ವಚನಗಳ ಮೂಲಕ ಸಮಾನತೆ, ಸಹಬಾಳ್ವೆ ಮತ್ತು ಸರ್ವರ ಕಲ್ಯಾಣದ ಸಂದೇಶ ಸಾರಿದರು. ಅಕ್ಕಮಹಾದೇವಿ, ಮುಕ್ತಾಯಕ್ಕ ಸೇರಿದಂತೆ ಶರಣೆಯರ ವಚನಗಳು ಮಹಿಳಾ ಸ್ವಾತಂತ್ರ್ಯ ಮತ್ತು ಸಾಮಾಜಿಕ ಪ್ರಜ್ಞೆಗೆ ಸಾಕ್ಷಿಯಾಗಿವೆ. ಶರಣರ ಸಮಾನತೆಯ ಆಶಯಗಳು ಸಂವಿಧಾನದ ಮೌಲ್ಯಗಳಿಗೂ ಪೂರಕವಾಗಿವೆ ಎಂದರು.

ನಾಡಿನ ಹಬ್ಬಗಳು ಜನಪದ ಸಂಸ್ಕೃತಿಯ ಜೀವಂತ ಅಭಿವ್ಯಕ್ತಿಗಳಾಗಿವೆ. ಜನಪದ ಗೀತೆಗಳು ಗ್ರಾಮೀಣ ಬದುಕು, ತಾಯಿಯ ಮಮತೆ, ಕುಟುಂಬದ ಬಾಂಧವ್ಯ ಹಾಗೂ ಪ್ರಕೃತಿಯೊಂದಿಗಿನ ಸಂಬಂಧವನ್ನು ಪ್ರತಿಬಿಂಬಿಸುತ್ತವೆ. ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಿರುವ ಜನಪದ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕು. ಕುಟುಂಬದಲ್ಲಿ ಸಂಸ್ಕಾರ, ಮಾನವೀಯತೆ, ಹಿರಿಯರ ಗೌರವ ಮತ್ತು ಸಹಬಾಳ್ವೆಯ ಗುಣಗಳನ್ನು ಬೆಳೆಸುವಲ್ಲಿ ತಾಯಂದಿರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಸಹಕಾರ ಕ್ಷೇತ್ರದ ಪಿತಾಮಹ ಸಿದ್ದನಗೌಡ ಪಾಟೀಲರ ಉದಾರತೆ, ಸಾಮಾಜಿಕ ಕಳಕಳಿ ಮತ್ತು ದೂರದೃಷ್ಟಿಯನ್ನು ಸ್ಮರಿಸಿದ ಶ್ರೀಗಳು, ಅವರ ಸಾಧನೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಬೇಕು. ಅವರ ಪ್ರತಿಮೆ ಸ್ಥಾಪನೆಗೆ ಎಲ್ಲರೂ ಸಹಕರಿಸಬೇಕು ಎಂದು ಕರೆ ನೀಡಿದರು.

ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಅವರು 'ಮಹಿಳೆಯರು ಮತ್ತು ಹಬ್ಬ-ಹರಿದಿನಗಳು' ವಿಷಯವಾಗಿ ಮಾತನಾಡಿ, ಹಬ್ಬಗಳು ಕುಟುಂಬದ ಸದಸ್ಯರನ್ನು ಒಂದುಗೂಡಿಸಿ ಪ್ರೀತಿ, ವಿಶ್ವಾಸ, ಸಹಕಾರ ಮತ್ತು ಸಂಸ್ಕಾರಗಳನ್ನು ಬೆಳೆಸುತ್ತವೆ. ಭಾರತೀಯ ಸಂಸ್ಕೃತಿಯ ಸಂರಕ್ಷಣೆ ಹಾಗೂ ಕುಟುಂಬದ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ ಎಂದರು.

ಈ ಸಂದರ್ಭದಲ್ಲಿ ಸಹಕಾರ ಸೇವಾ ರತ್ನ ಪ್ರಶಸ್ತಿ ಪುರಸ್ಕೃತ ಸಿ.ಕೆ. ಮಾಳಶೆಟ್ಟಿ ಹಾಗೂ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ರಮೇಶ ಚಲವಾದಿ ಅವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿ.ಕೆ. ಮಾಳಶೆಟ್ಟಿ, ಸಿದ್ದನಗೌಡ ಪಾಟೀಲರ ಪುತ್ಥಳಿಯನ್ನು ಗದುಗಿನಲ್ಲಿ ಸ್ಥಾಪಿಸುವ ಉದ್ದೇಶವಿದ್ದು, ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ, ನಿವೃತ್ತ ತಹಶೀಲ್ದಾರ್ ಎ.ಟಿ. ನರೇಗಲ್ಲ ಸಮಿತಿಯ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಪ್ರಸಾದ ಸೇವೆಯ ಜವಾಬ್ದಾರಿ ವಹಿಸಿಕೊಂಡಿದ್ದ ಗದಗ-ಬೆಟಗೇರಿ ನಗರಸಭೆಯ ನಿವೃತ್ತ ಪೌರಾಯುಕ್ತ ಜಗದೀಶಚಂದ್ರ ನಾಡಗೌಡರ, ನಿವೃತ್ತ ಶಿಕ್ಷಕ ದೇವೇಂದ್ರಪ್ಪ ಅಂಗಡಿ ಹಾಗೂ ನಿವೃತ್ತ ನೌಕರ ಜಿ.ವಿ. ಇಟಗಿ ಅವರನ್ನು ಸನ್ಮಾನಿಸಲಾಯಿತು. ಸಮಿತಿಯ ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿದ್ದರು.

ಆರಂಭದಲ್ಲಿ ವಿ.ಬಿ. ತಿರ್ಲಾಪೂರ ನಿಧನಕ್ಕೆ ಸಂತಾಪ ಸಲ್ಲಿಸಲಾಯಿತು. ವಿಶಾಲಾಕ್ಷಿ ಕಲ್ಲನಗೌಡ್ರ ಪ್ರಾರ್ಥಿಸಿದರು. ಕಾರ್ಯದರ್ಶಿ ಕೆ.ಪಿ. ಗುಳಗೌಡ್ರ ಸ್ವಾಗತಿಸಿ ಪರಿಚಯಿಸಿದರು. ಬಿ.ಎಚ್. ಗರಡಿಮನಿ ನಿರೂಪಿಸಿದರು. ಸಂಗೀತಾ ಕುರಿ ವಂದಿಸಿದರು.

ಸುದರ್ಶನ ಹಾನಗಲ್ಲ, ಎಸ್. ಎಸ್. ಪಾಳೇಗಾರ, ಆರ್.ಬಿ. ಅಂದಪ್ಪನವರ, ವಿ.ಆರ್. ಗೊಬ್ಬರಗುಂಪಿ, ಸಾಗರ ಬಿಂಗಿ, ಎಸ್.ಎಸ್. ಪಾಟೀಲ, ಪ್ರೊ. ವಿ.ವೈ. ಮಕ್ಕಣ್ಣವರ, ಡಾ. ಎಂ. ಎನ್. ಕಾಮನಹಳ್ಳಿ, ಡಾ. ಎಸ್. ಎನ್. ವೆಂಕಟಾಪೂರ, ಕೆ.ಬಿ. ಕೊಣ್ಣೂರ, ಪ್ರೇಮಾ ಗುಳಗೌಡ್ರ, ಪುಷ್ಪಾ ಭಂಡಾರಿ ಹಾಗೂ ಕವಿತಾ ಹಾದಿ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕಾಶೀ ವಿಶ್ವನಾಥನ ಪಲ್ಲಕ್ಕಿ ಸೇವೆ ಶ್ರದ್ಧಾಭಕ್ತಿಯಿಂದ ಜರುಗಿತು.

## ರೋಟರಿ ಕ್ಲಬ್‌ನಿಂದ ಇ-ತ್ಯಾಜ್ಯ ಸಂಗ್ರಹ ಅಭಿಯಾನ




**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಮಾಲಿನ್ಯ ತಡೆಗಟ್ಟಿ ಸ್ವಚ್ಛ ಹಾಗೂ ಹಸಿರು ಸಮಾಜ ನಿರ್ಮಿಸುವ ಉದ್ದೇಶದಿಂದ ರೋಟರಿ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಅ. 11ರಿಂದ ಆರಂಭವಾಗಿರುವ ಇ-ತ್ಯಾಜ್ಯ ಸಂಗ್ರಹ ಅಭಿಯಾನ ಅ. 17ರವರೆಗೆ ನಡೆಯಲಿದೆ ಎಂದು ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಎಸ್. ಉಗಲಾಟ ತಿಳಿಸಿದ್ದಾರೆ.

ಅಭಿಯಾನದ ಅಂಗವಾಗಿ ಇಂದು ಅ. 12ರಂದು ಬೆಳಿಗ್ಗೆ 10.30ಕ್ಕೆ ನಗರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಕಾರ್ಯಕ್ರಮ ನಡೆಯಲಿದೆ. ಮೊಬೈಲ್, ಲ್ಯಾಪ್‌ಟಾಪ್, ಕಂಪ್ಯೂಟರ್, ಪ್ರಿಂಟರ್, ಟಿವಿ, ಬ್ಯಾಟರಿ ಸೇರಿದಂತೆ ಬಳಕೆಯಲ್ಲಿಲ್ಲದ ಎಲೆಕ್ಟ್ರಾನಿಕ್ ವಸ್ತುಗಳನ್ನು ಸಂಗ್ರಹಿಸಲಾಗುತ್ತದೆ.

ನಗರದ ಜಿಲ್ಲಾ ಕ್ರೀಡಾಂಗಣದ ಎದುರಿರುವ ಉಷಾದೇವಿ ಜಿ. ಕುಸ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಸಂಗ್ರಹ ಕೇಂದ್ರ ತೆರೆಯಲಾಗಿದೆ. ಸಾರ್ವಜನಿಕರು ಮನೆ ಹಾಗೂ ಕಚೇರಿಗಳಲ್ಲಿರುವ ಇ-ತ್ಯಾಜ್ಯವನ್ನು ಇಲ್ಲಿ ನೀಡಿ ಅಭಿಯಾನಕ್ಕೆ ಸಹಕರಿಸುವಂತೆ ಸಂಘಟಕರು ಮನವಿ ಮಾಡಿದ್ದಾರೆ.

ಇ-ತ್ಯಾಜ್ಯವನ್ನು ಸಾಮಾನ್ಯ ಕಸದೊಂದಿಗೆ ವಿಲೇವಾರಿ ಮಾಡುವುದರಿಂದ ಪರಿಸರಕ್ಕೆ ಹಾನಿಯಾಗುವ ಸಾಧ್ಯತೆಯಿದೆ. ಸೂಕ್ತ ಸಂಗ್ರಹ ಮತ್ತು ಮರುಸಂಸ್ಕರಣೆಯಿಂದ ಪರಿಸರ ಮಾಲಿನ್ಯ ನಿಯಂತ್ರಣ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆಗೆ ನೆರವಾಗಲಿದೆ.

ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನ ಪ್ರೊ. ಲೋಹಿತ್ ಜವಳಿ ಹಾಗೂ ಡಾ. ಶೈಲಜಾ ಮುದೇನಗುಡಿ ಸಂಪನ್ಮೂಲ ವ್ಯಕ್ತಿಗಳಾಗಿದ್ದಾರೆ. ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ, ರೋಟರ್ಯಾಕ್ಟ್ ಕ್ಲಬ್ ಗದಗ-ಬೆಟಗೇರಿ ಹಾಗೂ ವೈಆರ್‌ಸಿ ಕ್ಲಬ್, ಕೆಎಲ್‌ಇ ಆರ್ಟ್ಸ್ ಕಾಮರ್ಸ್ ಕಾಲೇಜು ಅಭಿಯಾನಕ್ಕೆ ಸಹಯೋಗ ನೀಡಿವೆ.

ಇವೆಂಟ್ ಚೇರ್‌ಮನ್ ಶ್ರೀಧರ ಸುಲ್ತಾನಪೂರ, ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಎಸ್. ಉಗಲಾಟ ಹಾಗೂ ಕಾರ್ಯದರ್ಶಿ ಅಕ್ಷಯ್ ವಿ. ಶೆಟ್ಟಿ ಅಭಿಯಾನದ ನೇತೃತ್ವ ವಹಿಸಿದ್ದಾರೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪರಿಸರ ಸಂರಕ್ಷಣೆಗೆ ಕೈಜೋಡಿಸುವಂತೆ ಕ್ಲಬ್ ಮನವಿ ಮಾಡಿದೆ.

## ಸಣ್ಣ ಸುದ್ದಿಗಳು

### ಮೈಸೂರು ದಸರಾ ವೇದಿಕೆಯಲ್ಲಿ 'ಭಾವ ಬಿಂದು ಕಾವ್ಯ ಸಿಂಧು' ಲೋಕಾರ್ಪಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರು ದಸರಾ ಮಹೋತ್ಸವದ ವೇದಿಕೆಯಲ್ಲಿ ಗದಗ ಜಿಲ್ಲೆಯ ಶಿಕ್ಷಕಿ ಹಾಗೂ ಕವಯಿತ್ರಿ ರತ್ನಾ ಗೀ. ಬದಿ ಸಂಪಾದಿಸಿ ಪ್ರಕಟಿಸಿರುವ ರಾಜ್ಯಮಟ್ಟದ ಪ್ರಾತಿನಿಧಿಕ ಕವನ ಸಂಕಲನ 'ಭಾವ ಬಿಂದು ಕಾವ್ಯ ಸಿಂಧು' ಅ. 15ರಂದು ಲೋಕಾರ್ಪಣೆಗೊಳ್ಳಲಿದೆ.

ಮೈಸೂರಿನಲ್ಲಿ ಬೆಳಿಗ್ಗೆ ರಾಷ್ಟ್ರಕವಿ ಜಿ.ಎಸ್. ಶಿವರುದ್ರಪ್ಪ ಸಾಂಸ್ಕೃತಿಕ ವೇದಿಕೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅವರು ಕವನ ಸಂಕಲನವನ್ನು ಬಿಡುಗಡೆಗೊಳಿಸುವರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ. ಮಾನಸ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

ಕರ್ನಾಟಕ ರಾಜ್ಯ ಉತ್ತಮ ಶಿಕ್ಷಕರ ಪ್ರಶಸ್ತಿ ವಿಜೇತೆ ರತ್ನಾ ಗೀ. ಬದಿ ಅವರು ಬಸಾಪುರ ಪ್ರಾಥಮಿಕ ಶಾಲೆಯ ಶಿಕ್ಷಕಿ-ಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾಹಿತ್ಯ ಕ್ಷೇತ್ರದಲ್ಲಿಯೂ ಗುರುತಿಸಿಕೊಂಡಿದ್ದಾರೆ. ಅವರು ಸಂಪಾದಿಸಿದ ಕವನ ಸಂಕಲನ ಮೈಸೂರು ದಸರಾ ಮಹೋತ್ಸವದ ವೇದಿಕೆಯಲ್ಲಿ ಬಿಡುಗಡೆಯಾಗುತ್ತಿರುವುದು ಜಿಲ್ಲೆಯ ಸಾಹಿತ್ಯ ವಲಯದ ಗಮನ ಸೆಳೆದಿದೆ.

ಕಾರ್ಯಕ್ರಮದಲ್ಲಿ ಸಂಕಲನದ ಸಂಪಾದಕಿ ರತ್ನಾ ಗೀ. ಬದಿ ಸೇರಿದಂತೆ ಸಾಹಿತ್ಯಾಸಕ್ತರು ಉಪಸ್ಥಿತರಿರುವರು. ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಕನ್ನಡ ಪುಸ್ತಕ ಪ್ರಾಧಿಕಾರದ 'ಮನೆಗೊಂದು ಗ್ರಂಥಾಲಯ' ಅನುಷ್ಠಾನ ಸಮಿತಿಯ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಎ.ಎಸ್. ಮಕಾನದಾರ ಹಾಗೂ ಸಮಿತಿ ಸದಸ್ಯರು ಮನವಿ ಮಾಡಿದ್ದಾರೆ.

### ವಿವೇಕಾನಂದ ನಗರದಲ್ಲಿ ಅಂಚೆ ಗ್ರಾಹಕ ಸ್ನೇಹಿ ಸೇವಾ ಕೇಂದ್ರ ಆರಂಭ




**ವಿಜಯಸಾಕ್ಷಿ ಸುದ್ದಿ, ಗದಗ**

ಅಂಚೆ ವ್ಯವಹಾರ ಸೇರಿದಂತೆ ಇಲಾಖೆಯ ವಿವಿಧ ಸೇವೆಗಳನ್ನು ಜನಸಾಮಾನ್ಯರಿಗೆ ಸುಲಭವಾಗಿ ತಲುಪಿಸುವ ಉದ್ದೇಶದಿಂದ ಗದಗ ನಗರದ ವಿವೇಕಾನಂದ ನಗರದಲ್ಲಿ ನೂತನ ಅಂಚೆ ಗ್ರಾಹಕ ಸ್ನೇಹಿ ಸೇವಾ ಕೇಂದ್ರ ಆರಂಭಿಸಲಾಗಿದೆ. ಗ್ರಾಹಕರು ಈ ಕೇಂದ್ರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ಹೇಳಿದರು.

ವಿವೇಕಾನಂದ ನಗರದಲ್ಲಿ ನೂತನ ಸೇವಾ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಅಂಚೆ ಇಲಾಖೆಯ ವಿವಿಧ ಸೇವೆಗಳು ಪ್ರತಿಯೊಬ್ಬ ಗ್ರಾಹಕರಿಗೂ ಸುಲಭವಾಗಿ ಲಭ್ಯವಾಗಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅಂಚೆ ಇಲಾಖೆ ಮೂಲಕವೂ ಒದಗಿಸಲಾಗುತ್ತಿದೆ. ಈ ಸೇವೆಗಳನ್ನು ತ್ವರಿತವಾಗಿ ಹಾಗೂ ಜನಸಾಮಾನ್ಯರಿಗೆ ಇನ್ನಷ್ಟು ಹತ್ತಿರವಾಗಿಸುವ ಉದ್ದೇಶದಿಂದ ಅಂಚೆ ಗ್ರಾಹಕ ಸ್ನೇಹಿ ಸೇವಾ ಕೇಂದ್ರಗಳನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ನಿರ್ಮಲಾ ಮುಳಗುಂದಮಠ, ಶರಣಬಸಯ್ಯ ಮುಳಗುಂದಮಠ, ವಿವೇಕಾನಂದ ನಗರ, ನಿಸರ್ಗ ಬಡಾವಣೆ ಹಾಗೂ ರಾಜೀವ್ ಗಾಂಧಿ ನಗರದ ಹಿರಿಯರು ಮತ್ತು ಅಂಚೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಗದಗ ಜಿಲ್ಲೆಯ ಕವಿಗೆ ರಾಜ್ಯಮಟ್ಟದ ಕಾವ್ಯ ಸಂಭ್ರಮಕ್ಕೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಮುಂಡರಗಿ ತಾಲೂಕಿನ ಜಂತಲಿ ಶಿರೂರು ಗ್ರಾಮದ ಜನಪದ ಕಲಾವಿದ ಹಾಗೂ ಕವಿ ಗವಿಶಿದ್ಧಯ್ಯ ಜ. ಹಳ್ಳಿಕೇರಿಮಠ ಅವರು ಶಿವಮೊಗ್ಗದಲ್ಲಿ ನಡೆಯಲಿರುವ ರಾಜ್ಯಮಟ್ಟದ ದಸರಾ ಕಾವ್ಯ ಸಂಭ್ರಮಕ್ಕೆ ಆಯ್ಕೆಯಾಗಿದ್ದಾರೆ.



ಶಿವಮೊಗ್ಗದ ಶರಾವತಿ ನಗರದ ಶ್ರೀ ಆದಿಚುಂಚನಗಿರಿ ಶಾಖಾಮಠದ ಶ್ರೀ ಕಾಲಭೈರವೇಶ್ವರ ದೇವಸ್ಥಾನದ ಆವರಣದಲ್ಲಿ ಅಕ್ಟೋಬರ್ 18ರಂದು ರಾಜ್ಯಮಟ್ಟದ ದಸರಾ ಕಾವ್ಯ ಸಂಭ್ರಮ ನಡೆಯಲಿದೆ.

ಕನ್ನಡ ಸಾಹಿತ್ಯ ಪರಿಷತ್ತು, ಶಿವಮೊಗ್ಗ ಜಿಲ್ಲಾ ಸಮಿತಿ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಸಾಂಸ್ಕೃತಿಕ ವೇದಿಕೆ (ರಿ.) ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾವ್ಯ ಸಂಭ್ರಮಕ್ಕೆ ಗದಗ ಜಿಲ್ಲೆಯ ಕವಿಯ ಆಯ್ಕೆಯಾಗಿರುವುದು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಶಿವಮೊಗ್ಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಿ. ಮಂಜುನಾಥ ಅವರು ಅಕ್ಟೋಬರ್ 12ರಂದು ಪ್ರಕಟಣೆ ಮೂಲಕ ಆಯ್ಕೆಯ ಮಾಹಿತಿ ತಿಳಿಸಿದ್ದಾರೆ.

## ಪಂಚಮಸಾಲಿ ತಾಲೂಕು ಘಟಕದ ಆಯ್ಕೆಗೆ ಮಾನ್ಯತೆ ನೀಡಿ

# ಸಮಾಜವೇ ದೊಡ್ಡದು, ಸಂಘವೇ ಅಂತಿಮವಲ್ಲ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಪಂಚಮಸಾಲಿ ಸಮಾಜದ ಹಿರಿಯರ ನೇತೃತ್ವದಲ್ಲಿ ಅ. 9ರಂದು ನಡೆದ ಸಭೆಯಲ್ಲಿ ಆಯ್ಕೆಯಾದ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ನೂತನ ಪದಾಧಿಕಾ-ರಿಗಳ ಆಯ್ಕೆಯನ್ನು ರಾಜ್ಯ ಸಂಘ ಪುರಸ್ಕರಿಸಬೇಕು ಎಂದು ಸಂಘದ ರಾಜ್ಯ ಸಂಚಾಲಕ ಸೋಮಣ್ಣ ಡಾಣಗಲ್ ಹಾಗೂ ಮುಖಂಡ ಚನ್ನಪ್ಪ ಜಗಲಿ ಆಗ್ರಹಿಸಿದರು.



ಸೋಮವಾರ ಸಮಾಜದ ಮುಖಂಡರ ಸಭೆ ನಡೆಸಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ನಾಲ್ಕೈದು ದಶಕಗಳಿಂದ ಪ್ರತಿ ಐದು ವರ್ಷಕ್ಕೊಮ್ಮೆ ತಾಲೂಕಿನ ಪಂಚಮಸಾಲಿ ಸಮಾಜದ ಹಿರಿಯರು ಒಗ್ಗೂಡಿ ಆಯ್ಕೆ ಮಾಡುತ್ತಿದ್ದ ತಾಲೂಕು ಘಟಕದ ಪದಾಧಿಕಾರಿಗಳ ಪಟ್ಟಿಗೆ ರಾಜ್ಯ ಸಂಘ ಮಾನ್ಯತೆ ನೀಡುತ್ತಾ ಬಂದಿದೆ. ಇದೇ ಪರಂಪರೆಯಂತೆ ಸಮಾಜದ ಹಾಲಿ ಅಧ್ಯಕ್ಷ ಮಂಜುನಾಥ ಮಾಗಡಿ ಅವರ ಅವಧಿ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಅ. 9ರಂದು ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ಸಮಾಜದ ಮಾಜಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಸೇರಿದಂತೆ ಹಲವು ಹಿರಿಯರ ನೇತೃತ್ವದಲ್ಲಿ ನೂತನ ತಾಲೂಕು ಅಧ್ಯಕ್ಷರಾಗಿ ಶಂಕರ ಎಂ. ರಾಗಿ ಹಾಗೂ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದರು.

ಆದರೆ, ಅ. 11ರಂದು ಪಂಚಮಸಾಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಪರಮೇಶ ಪಟ್ಟಣಶೆಟ್ಟಿ ಅವರು ರಾಜ್ಯಾಧ್ಯಕ್ಷರ ನಿರ್ದೇಶನದಂತೆ ಈ ಆಯ್ಕೆಯನ್ನು ಅಸಿಂಧು ಎಂದು ಘೋಷಿಸಿ ಪತ್ರಿಕಾ ಪ್ರಕಟಣೆ ನೀಡಿದ್ದಾರೆ. ಇದು ಸಮಾಜದ ಶ್ರೇಯೋಭಿವೃದ್ಧಿಗಾಗಿ ಹಿರಿಯರು ಕೈಗೊಂಡ ತೀರ್ಮಾನಕ್ಕೆ ಹಾಗೂ ಅವರ ಭಾವನೆಗಳಿಗೆ ಧಕ್ಕೆ ಉಂಟುಮಾಡಿದೆ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಸಂಘವು ತಾಲೂಕಿನ ಹಿರಿಯರಲ್ಲಿ ಕ್ಷಮೆಯಾಚಿಸಿ, ಅವರು ಕೈಗೊಂಡ ತೀರ್ಮಾನವನ್ನು ಪುರಸ್ಕರಿಸಬೇಕು. ಸಂಘಕ್ಕಿಂತ ಸಮಾಜ ಮುಖ್ಯವಾಗಿದ್ದು, ಸಮಾಜವಿದ್ದಾಗಲೇ ಸಂಘಕ್ಕೆ ಮಹತ್ವವಿದೆ. ಸಮಾಜವನ್ನು ಒಗ್ಗೂಡಿಸುವ ಕೆಲಸವನ್ನು ರಾಜ್ಯ ಸಂಘ ಮಾಡಬೇಕೇ ಹೊರತು, ಒಡಕು ಮೂಡಿಸುವ ಕೆಲಸ ಮಾಡಬಾರದು. ತಾಲೂಕಿನ ಹಿರಿಯರು ಕೈಗೊಂಡ ತೀರ್ಮಾನವೇ ಅಂತಿಮವಾಗಿದ್ದು, ಸಂಘದ ಹೊರತಾಗಿಯೂ ಸಮಾಜವನ್ನು ಸಂಘಟಿಸುವ ಶಕ್ತಿ ಅವರಿಗಿದೆ ಎಂದು ಹೇಳಿದರು.

ಮುಂದಿನ ಐದು ವರ್ಷಗಳ ಕಾಲ ತಾಲೂಕಿನ ಸಮಾಜದ ಎಲ್ಲ ಚಟುವಟಿಕೆಗಳು ನೂತನ ಅಧ್ಯಕ್ಷ ಶಂಕರ ರಾಗಿ ಅವರ ನೇತೃತ್ವದಲ್ಲೇ ನಡೆಯಲಿವೆ. ನ. 21ರಂದು ಲಕ್ಷ್ಮೇಶ್ವರದಲ್ಲಿ ನಡೆಯಲಿರುವ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತ್ಯುತ್ಸವ ಹಾಗೂ ವಿಜಯೋತ್ಸವವನ್ನು ಶಂಕರ ರಾಗಿ ಮತ್ತು ನೂತನ ಪದಾಧಿಕಾರಿಗಳ ನೇತೃತ್ವದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುವುದು. ಕಾರ್ಯಕ್ರಮದಲ್ಲಿ ಮಠಾಧೀಶರು, ರಾಜ್ಯಮಟ್ಟದ ಸಮಾಜದ ನಾಯಕರು, ರಾಜಕಾರಣಿಗಳು, ಹಿರಿಯರು ಹಾಗೂ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ಸಮಾಜ ಬಾಂಧವರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ರಮೇಶ ದನದಮನಿ, ಶಿವಾನಂದ ದೇಸಾಯಿ, ಮಂಜುನಾಥ ಹೊಗೆಸೊಪ್ಪಿನ, ಅಶೋಕ ಪಾಟೀಲ, ದೇವಣ್ಣ ತೋಟದ, ವಿರೂಪಾಕ್ಷಪ್ಪ ಆದಿ, ರಮೇಶ ಹಾಳದೋಟದ, ರುದ್ರಪ್ಪ ಉಮಚಗಿ, ಗಂಗಾಧರ ಮೆಣಸಿನಕಾಯಿ, ಶರಣು ಗೋಡಿ, ಶಿವಪ್ಪ ಕಟಗಿ, ಶಿವಾನಂದ ಮೆಕ್ಕಿ ಹಾಗೂ ಷಣ್ಮುಕಪ್ಪ ಗೋಡಿ ಉಪಸ್ಥಿತರಿದ್ದರು.

> ಸಂಘಕ್ಕಿಂತ ಸಮಾಜ ಮುಖ್ಯ. ಸಮಾಜವಿದ್ದಾಗಲೇ ಸಂಘಕ್ಕೆ ಬೆಲೆ. ಸಮಾಜವನ್ನು ಒಗ್ಗೂಡಿಸುವ ಕೆಲಸವನ್ನು ರಾಜ್ಯ ಸಂಘ ಮಾಡಬೇಕೇ ಹೊರತು, ಒಡಕು ಮೂಡಿಸುವ ಕೆಲಸ ಮಾಡಬಾರದು. ಸಮಾಜದ ಹಿರಿಯರು ಒಗ್ಗೂಡಿ ಕೈಗೊಂಡ ತೀರ್ಮಾನಕ್ಕೆ ಗೌರವ ನೀಡಬೇಕು. ಹಿರಿಯರ ಭಾವನೆಗಳಿಗೆ ಧಕ್ಕೆ ಉಂಟುಮಾಡಿರುವ ರಾಜ್ಯ ಸಂಘವು ತನ್ನ ನಿಲುವನ್ನು ಮರುಪ-ರಿಶೀಲಿಸಿ, ನೂತನ ಪದಾಧಿಕಾರಿಗಳ ಆಯ್ಕೆಯನ್ನು ಪುರಸ್ಕ-ರಿಸಬೇಕು.
>
> – ಸೋಮಣ್ಣ ಡಾಣಗಲ್
> ರಾಜ್ಯ ಸಂಚಾಲಕರು, ವೀರಶೈವ ಲಿಂಗಾಯತ ಪಂಚಮಸಾಲಿ ಸಂಘ

## SIR ರದ್ದತಿಗೆ ಆಗ್ರಹಿಸಿ ಜೈಲ್ ಭರೋ ಚಳವಳಿ

# ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯ




**ವಿಜಯಸಾಕ್ಷಿ ಸುದ್ದಿ, ರಾಯಚೂರು**

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಹಾಗೂ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿ ಸಿಪಿಐ(ಎಂಎಲ್) ಲಿಬರೇಶನ್ ಜಿಲ್ಲಾ ಸಮಿತಿ ವತಿಯಿಂದ ನಗರದ ಟಿಪ್ಪು ಸುಲ್ತಾನ್ ಉದ್ಯಾನವನದ ಬಳಿ ಜೈಲ್ ಭರೋ ಚಳವಳಿ ನಡೆಸಲಾಯಿತು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ನಾಗರಿಕರ ಮತದಾನದ ಹಕ್ಕುಗಳ ರಕ್ಷಣೆಗಾಗಿ ಈ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಪಕ್ಷದ ಮುಖಂಡರು ತಿಳಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಅಜೀಜ್ ಜಾಗೀರದಾರ್, ಮತದಾರರ ಪಟ್ಟಿ ಪರಿಷ್ಕರಣೆಯ ಹೆಸರಿನಲ್ಲಿ ಅರ್ಹ ಮತದಾರರ ಹೆಸರುಗಳು ಅಳಿಸಿಹೋಗುವ ಆತಂಕವಿದೆ. ಹೆಸರುಗಳನ್ನು ಮರುಸೇರ್ಪಡೆಗೊಳಿಸುವ ಪ್ರಕ್ರಿಯೆಯಲ್ಲಿನ ತೊಂದರೆಗಳು ಹಾಗೂ ಆಕ್ಷೇಪಣೆ ಸಲ್ಲಿಸುವ ಪ್ರಕ್ರಿಯೆಯ ದುರುಪಯೋಗದ ಬಗ್ಗೆ ಕಳವಳವಿದೆ ಎಂದು ಹೇಳಿದರು.

ಮತದಾನವು ಪ್ರಜಾಪ್ರಭುತ್ವದ ಮೂಲಭೂತ ಆಧಾರವಾಗಿದ್ದು, ಯಾವುದೇ ಅರ್ಹ ನಾಗ-ರಿಕರು ತಮ್ಮ ಹಕ್ಕಿನಿಂದ ವಂಚಿತರಾಗಬಾರದು. ದಲಿತರು, ಧಾರ್ಮಿಕ ಅಲ್ಪಸಂಖ್ಯಾತರು, ವಲಸೆ ಕಾರ್ಮಿಕರು, ಮಹಿಳೆಯರು ಹಾಗೂ ಇತರ ಅಂಚಿನಲ್ಲಿರುವ ಸಮುದಾಯಗಳ ಮತದಾನದ ಹಕ್ಕುಗಳಿಗೆ ಧಕ್ಕೆಯಾಗದಂತೆ ಚುನಾವಣಾ ಆಯೋಗ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು. ಕರ್ನಾಟಕದಲ್ಲಿ ನಡೆಯುತ್ತಿರುವ ಖುಖು ಪ್ರಕ್ರಿಯೆಯನ್ನು ತಕ್ಷಣ ರದ್ದುಗೊಳಿಸಿ, ಜನವರಿ 2025ರಲ್ಲಿ ಇದ್ದ ಮತದಾರರ ಪಟ್ಟಿಗಳನ್ನು ಮರುಸ್ಥಾಪಿಸಬೇಕು. ಪಟ್ಟಿಯಿಂದ ಅಳಿಸಲಾದ ಅರ್ಹ ಮತದಾರರ ಹೆಸರುಗಳನ್ನು ಮರುಸೇರ್ಪಡೆಗೊಳಿಸಿ, ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕನ್ನು ಖಚಿತಪಡಿಸಬೇಕು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಪಾರದರ್ಶಕತೆ, ಕಾನೂನುಬದ್ಧತೆ ಹಾಗೂ ಹೊಣೆಗಾರಿಕೆಯನ್ನು ಕಾಪಾಡಬೇಕು ಎಂದು ಪಕ್ಷ ಆಗ್ರಹಿಸಿತು.

ಚುನಾವಣಾ ಆಯೋಗವು ಸ್ವತಂತ್ರ ಸಾಂವಿಧಾನಿಕ ಸಂಸ್ಥೆಯಾಗಿದ್ದು, ಪ್ರಜಾಸತ್ತಾತ್ಮಕ ಹಕ್ಕುಗಳನ್ನು ರಕ್ಷಿಸುವ ಹೊಣೆಗಾ-ರಿಕೆ ಹೊಂದಿದೆ. ಅರ್ಹ ನಾಗ-ರಿಕರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಯಾವುದೇ ಕ್ರಮವನ್ನು ಸಹಿಸಲಾಗದು. ಪ್ರಜಾಪ್ರಭುತ್ವ ಹಾಗೂ ಮತದಾನದ ಹಕ್ಕಿನ ರಕ್ಷಣೆಗಾಗಿ ಜನರು ಹೋರಾಟದಲ್ಲಿ ಭಾಗವಹಿಸಬೇಕು ಎಂದು ಮುಖಂಡರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಕಾರ್ಯದರ್ಶಿ ನಾಗರಾಜ್ ಪೂಜಾರ್, ತಾಲೂಕುಕಾರ್ಯದರ್ಶಿ ಅಜೀಜ್ ಜಾಗೀರದಾರ್, ಮುಖಂಡರಾದ ಜಿಲಾನಿ ಯರಗೇರಾ, ಆರ್.ಎಚ್. ಕಲ್ಮಗಿ, ಬಸವರಾಜ್ ಬೆಳಮುಗಿ, ಭೀಮಯ್ಯ, ಜಗದೀಶ್, ಹನೀಫ್ ಅಬಕಾರಿ, ಖಾದರ್, ವೀರೇಶ್, ಜೋಳಯ್ಯ, ನರಸಪ್ಪ, ಈರಣ್ಣ, ಎಲ್ಲಪ್ಪ, ಮಹೇಂದ್ರ, ಹನುಮಂತ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನವರಾತ್ರಿ ಸಂಭ್ರಮದಲ್ಲಿ ಮಿಂದೆದ್ದ ರೆಡ್ಡಿ ಮಹಿಳಾ ಬಳಗ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕಳಸಾಪುರ ರಸ್ತೆಯ ಪ್ರೈಮ್ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ಗದಗ ಜಿಲ್ಲಾ ರೆಡ್ಡಿ ಮಹಿಳಾ ಬಳಗದ ವತಿಯಿಂದ 2026ರ ನವರಾತ್ರಿ ಪ್ರಾರಂಭೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಬಳಗದ ಸಹೋದರಿಯರು ಸಾಂಪ್ರದಾಯಿಕ ಕೋಲಾಟದ ಮೂಲಕ ನಾಡಿನ ಸಂಸ್ಕೃತಿ ಮತ್ತು ಹಬ್ಬದ ಸಡಗರವನ್ನು ಅನಾವರಣಗೊಳಿಸಿದರು.

ನವರಾತ್ರಿ ನವದುರ್ಗೆಯರ ಆರಾಧನೆಯ ಪವಿತ್ರ ಉತ್ಸವವಾಗಿದ್ದು, ಬದುಕಿನ ಮೌಲ್ಯಗಳು, ಸಕಾರಾತ್ಮಕ ಚಿಂತನೆ ಹಾಗೂ ಒಳ್ಳೆಯತನದ ಮಹತ್ವವನ್ನು ಸಾರುತ್ತದೆ. ಈ ಹಿನ್ನೆಲೆಯಲ್ಲಿ ಬಳಗದ ಸದಸ್ಯೆಯರು ಒಗ್ಗಟ್ಟಿನಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹಬ್ಬದ ಸಂಭ್ರಮವನ್ನು ಹಂಚಿಕೊಂಡರು.

ಕಾರ್ಯಕ್ರಮದ ಆಯೋಜ-ಕರಾದ ಸುಮಾ ಶಿವನಗೌಡರ, ಸವಿತಾ ಹೊಸಮನಿ, ಆಶಾ ಒದುಗೌಡರ ಹಾಗೂ ವರ್ಷಾ ಮೆಕಳಿ ಅವರು ಸಿಹಿ ವಿತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕವಿತಾ ಕೊಣ್ಣೂರ್ ಮಾತನಾಡಿ, ನವರಾತ್ರಿ ಪ್ರತಿಯೊಬ್ಬರಲ್ಲೂ ನವಚೈತನ್ಯ ಮೂಡಿಸುವ ವಿಶೇಷ ಉತ್ಸವವಾಗಿದೆ. ದುಷ್ಟಶಕ್ತಿಗಳ ಸಂಹಾರ ಮತ್ತು ಒಳ್ಳೆಯತನದ ರಕ್ಷಣೆಯ ಸಂಕೇತವಾದ ದೇವಿಯ ಆರಾಧನೆ ಜನರಲ್ಲಿ ಸಕಾರಾತ್ಮಕ ಚಿಂತನೆಯನ್ನು ಬೆಳೆಸುತ್ತದೆ. ಬದುಕಿನ ನೀತಿ, ಮೌಲ್ಯಗಳನ್ನು ತಿಳಿಸುವ ಈ ಹಬ್ಬ ನಮ್ಮ ನಾಡಿನ ಸಂಸ್ಕೃತಿಯ ಪ್ರತೀಕವಾಗಿದೆ ಎಂದರು.

ಸವಿತಾ ಭರಮಗೌಡರ್ ಮಾತನಾಡಿ, ಮಹಿಳೆಯರು ಇಂತಹ ಕಾರ್ಯಕ್ರಮಗಳ ಮೂಲಕ ಒಗ್ಗಟ್ಟಿನಿಂದ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಸಾಮೂಹಿಕ ಆಚರಣೆಗಳು ಪರಸ್ಪರ ಒಡನಾಟ, ಸ್ನೇಹ, ಬಾಂಧವ್ಯ ಮತ್ತು ಮಾನವ ಸಂಬಂಧಗಳನ್ನು ಗಟ್ಟಿಗೊಳಿಸುತ್ತವೆ. ಜಗನ್ಮಾತೆಯ ಆರಾಧನೆ ಮನಸ್ಸಿಗೆ ನೆಮ್ಮದಿ ನೀಡುವಲ್ಲಿಯೂ ಸಹಕಾ-ರಿಯಾಗಿದೆ ಎಂದು ಹೇಳಿದರು.

ಯಶೋಧಾ ಗದ್ದಿಕೇರಿ ಮಾತನಾಡಿ, ರೆಡ್ಡಿ ಮಹಿಳಾ ಬಳಗದ ವತಿಯಿಂದ ನಡೆಯುತ್ತಿರುವ ವಿನೂತನ ಕಾರ್ಯಕ್ರಮಗಳು ಸಮಾಜಕ್ಕೆ ಉಪಯುಕ್ತವಾಗಿವೆ. ನವರಾತ್ರಿಯಂತಹ ಸಾಂಸ್ಕೃತಿಕ ಆಚರಣೆಗಳು ಧಾರ್ಮಿಕ ಮನೋಭಾವವನ್ನು ಹೆಚ್ಚಿಸುವುದರ ಜತೆಗೆ ಮನಸ್ಸಿನ ಆತಂಕಗಳನ್ನು ದೂರಮಾಡಿ ನೆಮ್ಮದಿ ನೀಡಲು ಸಹಕಾರಿಯಾಗುತ್ತವೆ ಎಂದರು.

ವಿದ್ಯಾ ಕೊಳ್ಳಿ ಸ್ವಾಗತಿಸಿದರು. ಶೋಭಾ ಭೂಮರಡ್ಡಿ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಶೈಲಜಾ ಕವಲೂರ, ಸುನಿತಾ ಕೋನರೆಡ್ಡಿ, ಸುಧಾ ಹುಚ್ಚಣ್ಣವರ, ಶೋಭಾ ಪಾಟೀಲ್, ರಾಜೇಶ್ವರಿ ಶಿರೋಳ್, ಸೌಮ್ಯ ಹುಚ್ಚಣ್ಣವರ, ಶಾರದಾ ಕವಲೂರ, ಲತಾ ಮುಂಬಾರಡ್ಡಿ, ಶೈಲಾ ಬೆಂತೂರ್, ಗಿರಿಜಾ ಮಾದಾಪೂರ್, ಗಂಗಮ್ಮ ದೇಸಾಯಿ, ಕವಿತಾ ಪಾಟೀಲ್, ದಾಕ್ಷಾಯಿಣಿ, ವಿಜಯಲಕ್ಷ್ಮಿ ಗೋನವರ್, ಸುಪ್ರಿಯಾ ಸೇ-ರಿದಂತೆ ಬಳಗದ ಸದಸ್ಯೆಯರು ಉಪಸ್ಥಿತರಿದ್ದರು.

## ಅಡವೀಂದ್ರಸ್ವಾಮಿ ಮಠದಲ್ಲಿ 46ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನಕ್ಕೆ ಚಾಲನೆ

# ದುಷ್ಟ ನಿಗ್ರಹ, ಶಿಷ್ಟ ಪರಿಪಾಲನೆಯೇ ದಸರಾ ಸಂದೇಶ



**ವಿಜಯಸಾಕ್ಷಿ ಸುದ್ದಿ ಗದಗ**

ದುಷ್ಟ ನಿಗ್ರಹ, ಶಿಷ್ಟ ಪರಿಪಾಲನೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು, ಅಸಹಾಯಕರಿಗೆ ನೆರವಾಗಿ ನಿಲ್ಲುವ ಮೂಲಕ ಕಾಯಕ ಮಾಡಿದಾಗಲೇ ದಸರಾ ಆಚರಣೆ ಸಾರ್ಥಕವಾಗುತ್ತದೆ ಎಂದು ಗದಗ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಹ ಪ್ರಾಧ್ಯಾಪಕಿ ಹಾಗೂ ಸಮುದಾಯ ವೈದ್ಯಕೀಯ ವಿಭಾಗದ ಡಾ. ರುದ್ರಮ್ಮ ಜೆ. ಹೇಳಿದರು.

ನಗರದ ಅಡವೀಂದ್ರಸ್ವಾಮಿ ಮಠದಲ್ಲಿ 2026ನೇ ಸಾಲಿನ ದಸರಾ ಮಹೋತ್ಸವದ ಅಂಗವಾಗಿ ನಡೆದ ಘಟಸ್ಥಾಪನೆ ಹಾಗೂ 46ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಪ್ರಾರಂಭೋತ್ಸವದಲ್ಲಿ ಅವರು ಮಾತನಾಡಿದರು.

ಹೆಣ್ಣುಮಕ್ಕಳು ಜಗದ ಕಣ್ಣು. ಧರ್ಮ ಹಾಗೂ ಮುತ್ತೈದೆ ಭಾಗ್ಯದ ತಿರುಳು ಮತ್ತು ಅದರ ತತ್ವಗಳನ್ನು ಪ್ರತಿವರ್ಷ ದಸರಾ ಸಂದರ್ಭದಲ್ಲಿ ನೆನಪಿಸುವ ಮೂಲಕ ತಾಯಂದಿರ ಜೀವನ ಪಾವನಗೊಳಿಸುವ ಅನೇಕ ವಿಧಾಯಕ ಕಾರ್ಯಕ್ರಮಗಳು ಶ್ರೀಮಠದಲ್ಲಿ ನಡೆಯುತ್ತಿರುವುದು ಶ್ಲಾಘನೀಯ ಎಂದರು.

ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವ ಹೆಚ್ಚುತ್ತಿರುವ ಇಂದಿನ ದಿನಗಳಲ್ಲಿ ಜನರಲ್ಲಿ ಸಂಸ್ಕೃತಿ, ಆಚಾರ-ವಿಚಾರಗಳನ್ನು ಬಿತ್ತಿ ಬೆಳೆಸುವ ಕಾರ್ಯವನ್ನು ಪುರಾಣ ಪ್ರವಚನಗಳ ಮೂಲಕ ಮಾಡುತ್ತಿರುವುದು ಸ್ವಾಗತಾರ್ಹ ಎಂದು ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಹೇಳಿದರು.

ಶಿವಾನುಭವಗೋಷ್ಠಿ ಸಮಿತಿ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಮಾತನಾಡಿ, ಒಂದೂವರೆ ಶತಮಾನದ ಇತಿಹಾಸ ಹಾಗೂ ಸುದೀರ್ಘ ಪರಂಪರೆ ಹೊಂದಿರುವ ಅಡವೀಂದ್ರಸ್ವಾಮಿ ಮಠವು ಧರ್ಮಜಾಗೃತಿ ಮತ್ತು ಧರ್ಮಪ್ರಜ್ಞೆಯೊಂದಿಗೆ ಸಮಾಜವನ್ನು ಜಾತ್ಯತೀತ ಮನೋಭಾವದಿಂದ ನೋಡುವ ಮೌಲ್ಯಗಳನ್ನು ಬೆಳೆಸುತ್ತಿದೆ. ಪುರಾಣ, ಶಿವಾನುಭವ, ಜಾತ್ರೆ ಹಾಗೂ ಧಾರ್ಮಿಕ ಬೋಧನೆಗಳ ಮೂಲಕ ಸಮಾಜದ ಹೊಣೆಗಾ-ರಿಕೆಯನ್ನು ಬಹುಮುಖಿಯಾಗಿ ನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಸಾನ್ನಿಧ್ಯ ವಹಿಸಿದ್ದ ಗದಗ ಶಿವಾನಂದ ಬ್ರಹನ್ಮಠದ ಜಗದ್ಗುರು ಶ್ರೀ ಸದಾಶಿವಾನಂದ ಮಹಾಸ್ವಾಮಿಗಳು ಮಾತನಾಡಿ, ದಸರಾ ದೇವಿಯ ಆರಾಧನೆಯ ಹಬ್ಬವಾಗಿದೆ.

ದೇವಿಯ ಆರಾಧನೆಯಷ್ಟೇ ಶಿವನ ಪೂಜೆ ಮತ್ತು ಆರಾಧನೆಗೂ ಮಹತ್ವವಿದ್ದು, ಶಿವನನ್ನು ಹೇಗೆ ಪೂಜಿಸಬೇಕು, ಆರಾಧಿಸಬೇಕು ಎಂಬುದನ್ನು ವಿವರಿಸಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀದೇವಿ ಪುರಾಣ ಪ್ರವಚನಕಾರ ಡಾ. ಪಂ. ರಾಜಗುರು ಗುರುಸ್ವಾಮಿ ಕಲಕೇರಿ ಅವರು ಪುರಾಣವನ್ನು ಆಲಿಸುವುದರಿಂದ ಹಾಗೂ ಓದುವುದರಿಂದ ದೊರೆಯುವ ಪ್ರಯೋಜನಗಳನ್ನು ವಿವಿಧ ಉದಾಹರಣೆಗಳ ಮೂಲಕ ವಿವ-ರಿಸಿದರು.

ಈ ಸಂದರ್ಭದಲ್ಲಿ ಜಿಮ್ಸ್ ಪ್ರಾಧ್ಯಾಪಕರಾದ ಡಾ. ಮಹಾಂತೇಶ ಪಾಟೀಲ, ಡಾ. ರೂಪಾ ಪಾಟೀಲ, ಜಾತ್ರಾಮಹೋತ್ಸವ ಸಮಿತಿ ಗೌರವಾಧ್ಯಕ್ಷ ಸದಾಶಿವಯ್ಯ ಮದ-ರಿಮಠ, ಸುವರ್ಣಾ ಮದರಿಮಠ, ಅಧ್ಯಕ್ಷ ಸಂತೋಷ ಮಹೇಶಚಂದ್ರ ಕಬಾಡರ, ಉಪಾಧ್ಯಕ್ಷರಾದ ಪ್ರಕಾಶ ಅಕ್ಕಿ, ವಿನಾಯಕ ಪಾಟೀಲ, ಕಾರ್ಯದರ್ಶಿ ಶಿವಪ್ರಭು ನೀಲಗುಂದ, ಕೋಶಾಧ್ಯಕ್ಷ ಪ್ರಭುಗೌಡ ಪಾಟೀಲ, ಮಹಿಳಾ ಘಟಕದ ಅಧ್ಯಕ್ಷೆ ಶಿವಲೀಲಾ ಅಕ್ಕಿ, ಉಪಾಧ್ಯಕ್ಷೆ ಅನ್ನಪೂರ್ಣೇಶ್ವರಿ ಕಬಾಡರ, ಕಾರ್ಯದರ್ಶಿ ಅಶ್ವಿನಿ ನೀಲಗುಂದ, ಅಮೃತಾ ವಾರಕರ, ವೇದಾ ಬಿದರೂರ ಹಾಗೂ ಪುರಾಣ ಪಠಣಕಾರ ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ವೇದಿಕೆಯಲ್ಲಿದ್ದರು.

ಪ್ರಸಾದ ಭಕ್ತಿಸೇವೆಯನ್ನು ಪಿ.ಸಿ. ಪುರಾಣೀಕಮಠ, ಸುಶೀಲಾ ಗಂಗಣ್ಣ ಕೋಟಿ, ಪ್ರಶಾಂತ ಶಾಬಾದಿಮಠ, ಪ್ರಸನ್ನ ಶಾಬಾದಿಮಠ, ಅರವಿಂದ ವಸ್ತ್ರದ, ವಿಶ್ವನಾಥ ಗಿಡ್ನಂದಿ, ಶಶಿಕುಮಾರ ಬಲೂಚಗಿ, ಡಾ. ರಾಜೇಂದ್ರ ಗಡಾದ, ಜಯಶುಭ ಮಾನ್ವಿ ಹಾಗೂ ಶರಣಯ್ಯ ರೇಶ್ಮಿ ವಹಿಸಿದ್ದರು.

ಬಸವರಾಜ ಬ್ಯಾಹಟ್ಟಿ ಸ್ವಾಗತಿಸಿದರು. ಜಯಶ್ರೀ ವಸ್ತ್ರದ ವಂದಿಸಿದರು.

> ದುಷ್ಟ ನಿಗ್ರಹ, ಶಿಷ್ಟ ಪರಿಪಾಲನೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಸಹಾಯಕರಿಗೆ ನೆರವಾಗಿ ನಿಂತು ಕಾಯಕ ಮಾಡಿದಾಗಲೇ ದಸರಾ ಆಚರಣೆ ಸಾರ್ಥಕವಾಗುತ್ತದೆ.
>
> – ಡಾ. ರುದ್ರಮ್ಮ ಜೆ.
> ಸಹ ಪ್ರಾಧ್ಯಾಪಕರು, ಸಮುದಾಯ ವೈದ್ಯಕೀಯ ವಿಭಾಗ, ಜಿಮ್ಸ್, ಗದಗ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka